MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 261 | ಶುಕ್ರವಾರ : 01-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 261 | FRIDAY : 01-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ರಾಹುಲ್ ಪಾದಯಾತ್ರೆಗೆ ಅವಕಾಶ ಕೊಟ್ಟರೆ ಹೋರಾಟ



**ಬೆಂಗಳೂರು, ಜು. 31–** ಲೋಕಸಭಾ ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ಕಾಂಗ್ರೆಸ್‌ನ ರಾಹುಲ್‌ಗಾಂಧಿ ಅವರು ಬೆಂಗಳೂರಿನ ಮಹದೇವಪುರದಿಂದ ಚುನಾವಣಾ ಆಯೋಗದ ಕಚೇರಿವರೆಗೂ ನಡೆಸಲು ಉದ್ದೇಶಿಸಿರುವ ಪಾದಯಾತ್ರೆಗೆ ಯಾವುದೇ ಕಾರಣಕ್ಕೂ ಅವಕಾಶ ಕೊಡಬಾರದು, ಪಾದಯಾತ್ರೆಗೆ ಅವಕಾಶ ನೀಡಿದರೆ ಬಿಜೆಪಿ ಬೀದಿಗಿಳಿದು ಹೋರಾಟ ನಡೆಸಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಎಚ್ಚರಿಕೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ರ‍್ಯಾಲಿ ಅಥವಾ ಸಿಎಂ ಮನೆಗೆ ಮುತ್ತಿಗೆ ಹಾಕುತ್ತೇವೆ ಎಂದರೆ ಪೊಲೀಸರು ಹೈಕೋರ್ಟ್ ಆದೇಶ ತೋರಿಸುತ್ತಾರೆ. ಇದೇ ಕಾನೂನು ಕಾಂಗ್ರೆಸ್‌ಗೂ ಅನ್ವಯವಾಗಬೇಕು. ನಮಗೊಂದು, ಅವರಿಗೊಂದು ಕಾನೂನು ಇಲ್ಲ ಎಂದು ಗುಡುಗಿದರು.

ಒಂದು ವೇಳೆ ಪೊಲೀಸರು ರಾಹುಲ್‌ಗಾಂಧಿ ಅವರ ಪಾದಯಾತ್ರೆಗೆ ಅವಕಾಶ ಕೊಟ್ಟರೆ ನಾವು ಬೀದಿಗಿಳಿದು ಹೋರಾಟ ಮಾಡುತ್ತೇವೆ ಎಂದು ಹೇಳಿದರು.

ಚುನಾವಣೆಯಲ್ಲಿ ಸೋತು ಹತಾಶರಾಗಿರುವ ರಾಹುಲ್‌ಗಾಂಧಿ ಈಗ ಕರ್ನಾಟಕಕ್ಕೆ ಬಂದು ಕಪಟ ನಾಟಕ ಆಡಲು ಮುಂದಾಗಿದ್ದಾರೆ ಎಂದು ಟೀಕಿಸಿದರು.

ರಾಹುಲ್‌ಗಾಂಧಿ ಅವರು ಆಗಸ್ಟ್ 5 ಅಥವಾ 6 ರ‍್ಯಾಲಿ ಮಾಡ್ತಾರೋ, ಹೋರಾಟ ಮಾಡ್ತಾರೋ ಗೊತ್ತಿಲ್ಲ. ರಾಹುಲ್‌ಗಾಂಧಿ ಬೆಂಗಳೂರಿಗೆ ಬರುವುದು ಖಚಿತವಾಗಿಲ್ಲ ಅವರು ಬೆಂಗಳೂರಿಗೆ ಬರುವುದು ಖಚಿತವಾದರೆ ಮುಂದೆ ನಾವು ಏನು ಮಾಡಬೇಕು ಎಂಬ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದರು

ಕಾಂಗ್ರೆಸ್ ನಾಯಕರು ಮಹದೇವಪುರದಿಂದ ಬೆಂಗಳೂರಿನ ಚುನಾವಣಾ ಆಯೋಗದ ಕಚೇರಿವರೆಗೂ **(2ನೇಪುಟಕ್ಕೆ)**

# ವಸತಿ ನಿಲಯ, ಶಾಲೆ, ಅಂಗನವಾಡಿ ಕೇಂದ್ರಗಳಲ್ಲಿ ನೀರು, ಶೌಚಾಲಯ ಕಲ್ಪಿಸಿ: ಈಶ್ವರ ಕಾಂದೂ ಸೂಚನೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.31–**ಜಿಲ್ಲೆಯಲ್ಲಿರುವ ಎಲ್ಲಾ ಸರ್ಕಾರಿ ಶಾಲೆ, ಅಂಗನವಾಡಿ ಕೇಂದ್ರ ಹಾಗೂ ವಸತಿ ಶಾಲೆಗಳಿಗೆ ಜಲ ಜೀವನ್ ಮೀಷನ್ (ಜೆಜೆಎಂ) ಯೋಜನೆಯಡಿ ನಳದ ಸಂಪರ್ಕ ಕಲ್ಪಿಸಿ, ನೀರು ಪೂರೈಸಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕಾಂದೂ ಅವರು ನಿರ್ದೇಶನ ನೀಡಿದರು.

ನಗರದ ಜಿ.ಪಂ ಸಭಾಂಗಣದಲ್ಲಿ ಗುರುವಾರ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರ

ಜಿಲ್ಲೆಯ ಸರಕಾರಿ ಶಾಲೆ, ಅಂಗನವಾಡಿ ಕೇಂದ್ರ ಹಾಗೂ ವಸತಿ ಶಾಲೆಗಳಲ್ಲಿನ ಮಕ್ಕಳಿಗೆ ಕುಡಿಯುವ ನೀರು, ಶೌಚಾಲಯದ ವ್ಯವಸ್ಥೆ ಕಲ್ಪಿಸಲು ಪ್ರಥಮ ಆದ್ಯತೆ ನೀಡಬೇಕು. ಆಯಾ ತಾಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು,



ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮತ್ತು ಎಇಇ ಅವರ ಗಮನಕ್ಕೆ ತಂದು ಶಾಲೆಗಳಿಗೆ ಬೇಕಾದ ಸೌಕರ್ಯ ಪಡೆದುಕೊಳ್ಳಬೇಕು. ಜಿಲ್ಲೆಯಾದ್ಯಂತ ನೀರಿನ ಸೌಲಭ್ಯ, ಶೌಚಾಲಯ ಸೇರಿದಂತೆ ಇನ್ನಿತರ ಸೌಕರ್ಯಗಳು ಇಲ್ಲದೆ ಇರುವ ಬಗ್ಗೆ ತುರ್ತಾಗಿ ಸಂಜೆಯೊಳಗೆ ವರದಿ ನೀಡಬೇಕೆಂದು ಡಿಡಿಪಿಐ ಅವರಿಗೆ ಸೂಚನೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಮುಖ್ಯ ಶಿಕ್ಷಕರು, ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸಮನ್ವಯ ಸಾಧಿಸಿ ಶಿಥಿಲಾವಸ್ಥೆಯಲ್ಲಿರುವ ಶಾಲಾ ಕೊಠಡಿಗಳನ್ನು ಪರಿಶೀಲಿಸಿ, ಹೊಸ ಶಾಲಾ ಕೊಠಡಿ ನಿರ್ಮಾಣಕ್ಕೆ ಕ್ರಿಯಾ ಯೋಜನೆ ರೂಪಿಸಿ ಜಿಲ್ಲಾ ಪಂಚಾಯತಿಗೆ ವರದಿ ಸಲ್ಲಿಸಬೇಕು. ಅದೇ ರೀತಿ ಶಿಥಿಲಾವಸ್ಥೆಗೆ ತಲುಪಿರುವ ಅಡುಗೆ ಕೋಣೆಗಳನ್ನು ಗುರುತಿಸಿ, ಮನರೇಗಾ ಅಥವಾ ಬೇರೆ ಅನುದಾನದಲ್ಲಿ ಅಡುಗೆ ಕೋಣೆ ನಿರ್ಮಾಣಕ್ಕೆ ಕ್ರಮಕೈಗೊಳ್ಳಬೇಕು. ಯಾವುದೇ ರೀತಿಯ ಅನಾಹುತ ಆಗುವ ಮೊದಲು ಮುನ್ನಚ್ಚರಿಕೆ**(2ನೇಪುಟಕ್ಕೆ)**

# ದೇವರಭೂಪೂರ ವಿದ್ಯುತ್ ತಂತಿ ದುರಸ್ತಿಗೆ ಜಯ ಕರ್ನಾಟಕ ರಕ್ಷಣಾ ಸೇನೆ ಒತ್ತಾಯ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.31–**ದೇವರಭೂಪೂರ ಗ್ರಾಮದಲ್ಲಿ ವಿದ್ಯುತ್ ತಂತಿಗಳು ನೇತಾಡುತ್ತಿದ್ದು, ಕೂಡಲೇ ದುರಸ್ತಿಗೊಳಿಸುವಂತೆ ಜಯ ಕರ್ನಾಟಕ ರಕ್ಷಣಾ ಸೇನೆ ಕಾರ್ಯಕರ್ತರು ಜೆಸ್ಕಾಂ ಕಛೇರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ತಾಲೂಕಿನ ದೇವರಭೂಪೂರ ಪಂಚಾಯಿತಿ ವ್ಯಾಪ್ತಿಯಲ್ಲಿ ಹಳ್ಳಿ ಮತ್ತು ದೊಡ್ಡಿಗಳು ಸೇರಿ ಸುಮಾರು 12 ಗ್ರಾಮಗಳಿಗೆ ಒಬ್ಬರೇ ಲೈನ್‌ಮೆನ್ ಇದ್ದಾರೆ. ಕೆಲಸದ ಒತ್ತಡದ ಪರಿಣಾಮ ನಿರ್ವಹಣೆ ಸರಿಯಾಗಿ ಆಗುತ್ತಿಲ್ಲ, ಮಳೆಗಾಲವಾದ್ದರಿಂದ ಜೋತುಬಿದ್ದ ತಂತಿಗಳನ್ನು ಮೇಲಕ್ಕೆತ್ತುವ ಕೆಲಸ ತುರ್ತಾಗಿ ಆಗಬೇಕಿದೆ. ಪಂಪ್‌ಸೆಟ್‌ಗಳಿಗೆ ಸರಿಯಾಗಿ ವಿದ್ಯುತ್ ಪೂರೈಕೆ ಆಗುತ್ತಿಲ್ಲದ ಪರಿಣಾಮ ಬೆಳೆಗಳು ಒಣಗುವ ಹಂತಕ್ಕೆ ಬಂದಿವೆ. ಪಂಪ್‌ಸೆಟ್‌ಗಳಿಗೆ ನಿರಂತರವಾಗಿ ವಿದ್ಯುತ್ ಪೂರೈಕೆ ಮಾಡುವಲ್ಲಿ ಜೆಸ್ಕಾಂ ವಿಫಲವಾಗುತ್ತಿದೆ. ಶ್ರಾವಣ ಮಾಸವಾದ್ದರಿಂದ ಪುರಾಣ, ಪ್ರವಚನ, ಪೂಜೆಗಳು ನಿರಂತರವಾಗಿ ನಡೆಯುತ್ತವೆ. ವಿದ್ಯುತ್ ಕಡಿತಗೊಂಡರೆ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತದೆ. ಕೂಡಲೇ ಪರಿಶೀಲಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಸಂಘಟನೆ ಅಧ್ಯಕ್ಷ ಹನುಮಂತ ನಾಯಕ, ಗ್ರಾಮ ಘಟಕ ಅಧ್ಯಕ್ಷ ಆದಪ್ಪ ನಾಯಕ, ಪ್ರವೀಣಕುಮಾರ ನಿಲೋಗಲ್, ನಿಂಗಪ್ಪ ಸೇರಿ ಇತರರು ಇದ್ದರು.

# ದತ್ತಿ ನಿಧಿ ಶೇವಣೆ ಸಂಗ್ರಹ ಅಭಿಯಾನ ಉತ್ತಮ ಪ್ರತಿಕ್ರಿಯೆ



**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜು.31–**ಸುವರ್ಣ ಕರ್ನಾಟಕ ಸಂಭ್ರಮದ ಸವಿನೆನಪಿನಲ್ಲಿ ದೇವದುರ್ಗ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ ದತ್ತಿ ನಿಧಿ ಶೇವಣೆ ಸಂಗ್ರಹ ಅಭಿಯಾನಕ್ಕೆ ಉತ್ತಮ ಸ್ಪಂದನೆ ದೊರೆತಿದ್ದು, ಜಿಲ್ಲೆಯಲ್ಲಿ ದ್ವಿತೀಯ ಸ್ಥಾನ ಪಡೆದುಕೊಂಡಿದೆ ಎಂದು ದೇವದುರ್ಗ ತಾಲೂಕು ಕಸಾಪ ಅಧ್ಯಕ್ಷ ಎಚ್. ಶಿವರಾಜ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

**ದೇವದುರ್ಗ ಕಸಾಪಕ್ಕೆ ದ್ವಿತೀಯ ಸ್ಥಾನ:**"ಹಸಿರಾಗಲಿ ಕನ್ನಡ, ಉಸಿರಾಗಲಿ ಕನ್ನಡ, ಎಲ್ಲಾದರೂ ಇರು ಎಂತಾದರು ಇರು ಎಂದೆಂದಿಗೂ ನೀ ಕನ್ನಡವಾಗಿರು, ಕನ್ನಡವೇ ಸತ್ಯ, ಕನ್ನಡವೇ ನಿತ್ಯ" ಎಂಬ ಧ್ಯೇಯದೊಂದಿಗೆ ಸುವರ್ಣ ಕರ್ನಾಟಕ ಸಂಭ್ರಮದ ನೆನಪಿನಲ್ಲಿ ದೇವದುರ್ಗ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ದತ್ತಿ ನಿಧಿ ಶೇವಣೆ ಸಂಗ್ರಹ ಅಭಿಯಾನವನ್ನು ಹಮ್ಮಿಕೊಂಡಿತ್ತು. ಈ ಅಭಿಯಾನಕ್ಕೆ ತಾಲೂಕಿನ ಕನ್ನಡಾಭಿಮಾನಿಗಳಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಈ ಅಭಿಯಾನದ ಮೂಲಕ ನೂತನವಾಗಿ 5 ದತ್ತಿ ನಿಧಿಗಳನ್ನು ಸಂಗ್ರಹಿಸಲಾಗಿದ್ದು, ಈ ಹಿಂದಿದ್ದ 20 ದತ್ತಿಗಳಿಗೆ ಇವು ಸೇರ್ಪಡೆಗೊಂಡಿವೆ. ಇದರೊಂದಿಗೆ ದೇವದುರ್ಗ ತಾಲೂಕು ಕಸಾಪದ ಒಟ್ಟು ದತ್ತಿಗಳ ಸಂಖ್ಯೆ 25ಕ್ಕೆ ಏರಿದೆ. ಈ ಸಾಧನೆಯಿಂದ ದೇವದುರ್ಗ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲೆಯಲ್ಲಿ ದ್ವಿತೀಯ ಸ್ಥಾನ ಪಡೆದುಕೊಂಡಿದೆ.ಜಿಲ್ಲೆಯಲ್ಲಿ ಒಟ್ಟು 56 ದತ್ತಿಗಳನ್ನು ಸಂಗ್ರಹಿಸಿರುವ ಸಿಂಧನೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಪ್ರಥಮ ಸ್ಥಾನದಲ್ಲಿದೆ ಎಂದು ಎಚ್. ಶಿವರಾಜ್ ವಿವರಿಸಿದ್ದಾರೆ.

# ಅ.3 ರಂದು ಚುಸಾಪ ಕಾರ್ಯ ಚಟುವಟಿಕೆಗಳ ಉದ್ಘಾಟನೆ ಹಾಗೂ ಪದಗ್ರಹಣ: ಮಹ್ಮದ್ ಮುಜೀಬ್




**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.31–**ಅ.3 ರಂದು ತಾಲೂಕ ಪಂಚಾಯತ ಸಭಾಂಗಣದಲ್ಲಿ ಬೆಳಿಗ್ಗೆ 10.30 ಕ್ಕೆ ಚುಟುಕು ಸಾಹಿತ್ಯ ಪರಿಷತ್ತಿನ ಕಾರ್ಯ ಚಟುವಟಿಕೆಗಳ ಉದ್ಘಾಟನೆ ಹಾಗೂ ಪದಗ್ರಹಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಚುಸಾಪ ಅಧ್ಯಕ್ಷ ಮಹ್ಮದ್ ಮುಜೀಬ್ ಹೇಳಿದರು.

ಗುರುವಾರ ಪಟ್ಟಣದ ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಾ ಚುಟುಕು ಸಾಹಿತ್ಯ ಪರಿಷತ್ತಿನಿಂದ ಹಿರಿಯ, ಯುವ ಸಾಹಿತಿಗಳನ್ನು ಪ್ರೋತ್ಸಾಹಿಸುವುದು ಹಾಗೂ ಅವಕಾಶಗಳನ್ನು ಒದಗಿಸಿಕೊಡುವ ಕಾರ್ಯವಾಗಿದೆ. ಚುಟುಕು ಸಾಹಿತ್ಯವು ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದುವುದರ ಜೊತೆಗೆ ಜನ ಜಾಗೃತಿ ಮೂಡಿಸಲು ತುಂಬಾ ಸಹಕಾರಿ ಮತ್ತು ಪರಿಣಾಮಕಾರಿ ಸಂದೇಶಗಳನ್ನು ನೀಡುವ ಉದ್ದೇಶವಾಗಿದೆ ಎಂದರು.

ಚುಟುಕು ಸಾಹಿತ್ಯ ಪರಿಷತ್ತಿನ ಕಾರ್ಯ ಚಟುವಟಿಕೆಗಳ ಉದ್ಘಾಟನೆ ಹಾಗೂ ಪದಗ್ರಹಣ ಕಾರ್ಯಕ್ರಮವನ್ನು ಕಸಾಪ ನಿಕಟಪೂರ್ವ ಜಿಲ್ಲಾಧ್ಯಕ್ಷ ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರು ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು **(2ನೇಪುಟಕ್ಕೆ)**

# ಪುರಸಭೆ ಹಂಗಾಮಿ ಅಧ್ಯಕ್ಷರಾಗಿ ಮೀನಾಕ್ಷಿ ಡಿ.ರಾಮಕೃಷ್ಣ ಅಧಿಕಾರ ಸ್ವೀಕಾರ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.31–**ಪುರಸಭೆ ಅಧ್ಯಕ್ಷೆ ಲಕ್ಷ್ಮೀ ಡಿ.ವೀರೇಶ ಅವರ ವೈದ್ಯಕೀಯ ರಜೆ ನಿಮಿತ್ಯ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಹಾಲಿ ಉಪಾಧ್ಯಕ್ಷೆ ಮೀನಾಕ್ಷಿ ಡಿ.ರಾಮಕೃಷ್ಣ ಅವರು ಇನ್ನುಳಿದ ಅವಧಿಯವರೆಗೂ ಹಂಗಾಮಿ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡರು.

ಬುಧವಾರ ಪುರಸಭೆಯ ಸಭಾಂಗಣದಲ್ಲಿ ನಡೆದ ಆಡಳಿತ ಮಂಡಳಿ ಸದಸ್ಯರ ಸಭೆಯಲ್ಲಿ ಪುರಸಭೆಯ ಮುಖ್ಯಾಧಿಕಾರಿ ಪರಶುರಾಮ ದೇವರಮನಿ ಅವರು ಇನ್ನುಳಿದ ಪುರಸಭೆಯ ಆಡಳಿತ ಅವಧಿಯ ವರೆಗೆ ಹಂಗಾಮಿ ಅಧ್ಯಕ್ಷರಾಗಿ ಉಪಾಧ್ಯಕ್ಷೆ ಮೀನಾಕ್ಷಿ ಡಿ.ರಾಮಕೃಷ್ಣ ಅವರು ಎಲ್ಲಾ ಸದಸ್ಯರ ಸಮ್ಮುಖದಲ್ಲಿ ಹಂಗಾಮಿ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡರು. ಹಂಗಾಮಿ ಅಧ್ಯಕ್ಷೆ ಮೀನಾಕ್ಷಿ ಅವರ ಪತಿ ಡಿ.ರಾಮಕೃಷ್ಣ ಅವರು 1995ರಲ್ಲಿ ಮೊದಲ ಬಾರಿಗೆ ಜನತಾ ಕಾಲೋನಿಯಿಂದ ಚುನಾಯಿತರಾಗಿ ಪುರಸಭೆ ಪ್ರವೇಶ ಮಾಡಿದ ಅವರು ಮಾಜಿ ಅಧ್ಯಕ್ಷ ಮುನೀರ್ ಪಾಷಾ ಅವರ ಅವಧಿಯಲ್ಲಿ ಉಪಾಧ್ಯಕ್ಷರಾಗಿ ನಂತರ



ಸ್ಥಾಯಿ ಸಮಿತಿ ಅಧ್ಯಕ್ಷರಾಗಿದ್ದರು. ಪ್ರಸ್ತುತ ಹಂಗಾಮಿ ಅಧ್ಯಕ್ಷರಾದ ಮೀನಾಕ್ಷಿ ಡಿ.ರಾಮಕೃಷ್ಣ ಅವರು ಕೂಡ ಎರಡು ಬಾರಿ ಪುರಸಭೆಯ ಚುನಾಯಿತ ಸದಸ್ಯರಾಗಿ ಉಪಾಧ್ಯಕ್ಷರಾಗಿದ್ದ ಅವರಿಗೆ ಈಗ ಪುರಸಭೆಯ ಇನ್ನುಳಿದ ಅವಧಿಯ ವರೆಗೆ ಹಂಗಾಮಿ ಅಧ್ಯಕ್ಷರಾಗಿ ಬುಧವಾರ ಅಧಿಕಾರ ವಹಿಸಿಕೊಂಡ ಮೀನಾಕ್ಷಿ ಡಿ.ರಾಮಕೃಷ್ಣ ಅವರಿಗೆ ಮಾಜಿ ಪುರಸಭೆಯ ಅಧ್ಯಕ್ಷರಾದ ಲಕ್ಷ್ಮೀ ಡಿ.ವೀರೇಶ, ಲಕ್ಷ್ಮೀದೇವಿ ನಾಯಕ, ನಜೀರುದ್ದೀನ್ ಖಾದ್ರಿಗುರು, ಸಬ್ಜಲಿ ಶಾಕ, ಜಿಲಾನಿ ಖುರೇಶಿ, ಮಾಜಿ ಉಪಾಧ್ಯಕ್ಷರಾದ ಸಂತೋಷಿ ಜಯಪ್ರಕಾಶ, ಸುಕಮುನಿ ಹಾಗೂ ಸದಸ್ಯರಾದ ಶಾಬೀರ ಪಾಷಾ, ವೆಂಕಟೇಶ ನಾಯಕ, ಫರೀದ್ ಉಮ್ರಿ, ಸಾಬೀರ್, ಭಾಷಾ ಸಾಬ್ ಸೇರಿದಂತೆ ಕಾಂಗ್ರೆಸ್ ಮುಖಂಡರಾದ ರಾಜಾ ಸುಭಾಷ್ ನಾಯಕ,ಮಹಾಂತೇಶ ಸ್ವಾಮಿ, ರೌಡೂರು, ಜಿ.ಪಂ. ಸದಸ್ಯರಾದ ಚಂದ್ರಶೇಖರ ಕುರ್ಡಿ, ಹನುಮೇಶ ಮದ್ಲಾಪೂರ ಹಾಗೂ ಸಲೀಂ, ಜಯಪ್ರಕಾಶ, ಅನೀಲ್ ಕುಮಾರ, ಸತ್ತರ್ ಬಂಗಲೆವಾಲೆ, ಚಂದ್ರ ಕಾಜಗಾರ್ ಸೇರಿದಂತೆ ವಿವಿಧ ಸಂಘ, ಸಂಸ್ಥೆಗಳ ಮುಖಂಡರು ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಪುರಸಭ ಸಿಬ್ಬಂದಿ ವರ್ಗದವರು ಸನ್ಮಾನಿಸಿ ಶುಭಕೋರಿದರು.

# ಸಣ್ಣ ಕೈಗಾರಿಕೆಗಳ ಸ್ಥಾಪನೆಯಿಂದ ಆರ್ಥಿಕ ವೃದ್ಧಿ, ಉದ್ಯೋಗ ಸೃಷ್ಟಿ: ಎಸ್.ಕಮಲ್ ಕುಮಾರ್ ಸಲಹೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.31–** ಸಣ್ಣ ಕೈಗಾರಿಕೆಗಳ ಸ್ಥಾಪನೆಯಿಂದ ಆರ್ಥಿಕ ವೃದ್ಧಿಯ ಜೊತೆಗೆ ಉದ್ಯೋಗ ಸೃಷ್ಟಿಗೂ ನೆರವಾಗಲಿದ್ದು, ಈ ಬಗ್ಗೆ ಯುವ ಉದ್ದಿಮೆದಾರರು ಸೇರಿದಂತೆ ಎಲ್ಲಾ ಉದ್ದಿಮೆದಾರರು ಗಮನ ಹರಿಸಿದಲ್ಲಿ ಉದ್ಯಮದಲ್ಲಿ ಅಭಿವೃದ್ಧಿ ಹೊಂದಬಹುದಾಗಿದೆ ಎಂದು ರಾಯಚೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಎಸ್.ಕಮಲ್ ಕುಮಾರ್ ಅವರು ಹೇಳಿದರು.

ಬುಧವಾರ ದಂದು ನಗರದ ಹೋಟೆಲ್ ರಂಜಿತಾ ಪ್ಯಾಲೆಸ್ ಸಭಾಂಗಣದಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿ.ಟಿ.ಪಿ.ಸಿ) ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಸಹಯೋಗದಲ್ಲಿ ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು ಯೋಜನೆಯಡಿಯಲ್ಲಿ ಲೀನ್ ಯೋಜನೆ ಮತ್ತು ಝೆಡ್. ಇ.ಡಿ. ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಶದಲ್ಲಿ ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಉತ್ತೇಜನ ನೀಡಿದಲ್ಲಿ ಆರ್ಥಿಕ



ವೃದ್ಧಿ ಜೊತೆಗೆ ಹೆಚ್ಚಿನ ಉದ್ಯೋಗಾವಕಾಶ ಸೃಷ್ಟಿಸಲು ಸಾಧ್ಯವಿದೆ. ಈ ದಿಸೆಯಲ್ಲಿ ಉದ್ದಿಮೆದಾರರನ್ನು ತೊಂದರೆ ಮುಕ್ತಗೊಳಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿಶೇಷ ಗಮನ ನೀಡುತ್ತಿವೆ ಎಂದರು.

ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವಲ್ಲಿ ಲೀನ್ ಯೋಜನೆ, ರಫ್ತು ಪ್ರಕ್ರಿಯೆ ಕುರಿತು ಹಮ್ಮಿಕೊಂಡಿರುವ ಕಾರ್ಯಾಗಾರ ಪ್ರತಿಯೊಬ್ಬರಿಗೂ ಅತ್ಯಂತ ಮುಖ್ಯವಾಗಿದ್ದು, ಈ ಯೋಜನೆಯ ಕುರಿತು ಕಾರ್ಯಾಗಾರದಲ್ಲಿ ತಿಳಿಸುವ ಅಂಶಗಳನ್ನು ಪ್ರತಿಯೊಬ್ಬರು ತಿಳಿದು ಸದುಪಯೋಗಪಡಿಸಿಕೊಳ್ಳುವಂತೆ ಅವರು ಮನವಿ ಮಾಡಿದರು.

ಇದೇ ವೇಳೆ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಕಮಲಕುಮಾರ ಜೈನ್ ಮಾತನಾಡಿ, ಉತ್ತರ ಕರ್ನಾಟಕ ಭಾಗವು ಅತ್ಯಂತ ಕಡೆಗಣನೆಯ ಭಾಗವಾಗಿದ್ದು, ಆದರೆ ಇಲ್ಲಿ ಸಿಗುವ ಸಂಪತ್ತು ಇನ್ನೆಲ್ಲೂ ಸಿಗುವುದಿಲ್ಲ. ಅದರಲ್ಲೂ ರಾಯಚೂರು ಕೈಗಾರಿಕೋದ್ಯಮವು ಅತ್ಯಂತ ಉನ್ನತ ಸ್ಥಾನದಲ್ಲಿದ್ದು, ಈ ಉದ್ಯಮಗಳಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿಯನ್ನು ತರುವ ನಿಟ್ಟಿನಲ್ಲಿ ಹಮ್ಮಿಕೊಂಡಿರುವ ಈ ಕಾರ್ಯಾಗಾರ ಸಹಕಾರಿಯಾಗಲಿದೆ ಎಂದರು.

ಕಾಟನ್, ಜಿನ್ನಿಂಗ್ ಮತ್ತು ಪ್ರೆಸ್ಸಿಂಗ್ ಅಸೋಸಿಯೇಷನ್ ಅಧ್ಯಕ್ಷ **(2ನೇಪುಟಕ್ಕೆ)**

## ಮೊದಲನೇಯ ಪುಟದಿಂದ

# ವಸತಿ ನಿಲಯ, ಶಾಲೆ, ಅಂಗನವಾಡಿ ಕೇಂದ್ರಗಳಲ್ಲಿ ನೀರು, ಶೌಚಾಲಯ ಕಲ್ಪಿಸಿ: ಈಶ್ವರ ಕಾಂದೂ ಸೂಚನೆ

ವಹಿಸಬೇಕು ಎಂದು ಸಿಇಓ ಅವರು ಸೂಚನೆ ನೀಡಿದರು. ಮನರೇಗಾ ಅಥವಾ ಒಗ್ಗೂಡಿಸುವಿಕೆ ಯೋಜನೆಯಡಿ ಕೈಗೊಂಡಿರುವ ಅಂಗನವಾಡಿ ಕೇಂದ್ರಗಳನ್ನು 3–4 ತಿಂಗಳೊಳಗೆ ಪೂರ್ಣಗೊಳಿಸಬೇಕು. ಜಿಲ್ಲೆಯಲ್ಲಿ 750 ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು, ಜಾಗ ಲಭ್ಯ ಇರುವ ಕಡೆ ಶಾಶ್ವತ ಕಟ್ಟಡ ಒದಗಿಸಬೇಕು. ಗ್ರಾಮ ಪಂಚಾಯತಿ ಮಟ್ಟದಲ್ಲಿ 227 ಅಂಗನವಾಡಿ ಕಟ್ಟಡಗಳು ಬಾಡಿಗೆ ಕೊಠಡಿಯಲ್ಲಿ ನಡೆಯುತ್ತಿದ್ದು, ಗ್ರಾಮೀಣ ಪ್ರದೇಶದಲ್ಲಿ ಸರ್ಕಾರಿ ಜಾಗ ಲಭ್ಯ ಇರುವುದರಿಂದ ತ್ವರಿತವಾಗಿ ಸರ್ಕಾರಿ ಜಾಗ ಗುರುತಿಸಿ ಮನರೇಗಾ ಅಥವಾ ಒಗ್ಗೂಡಿಸುವಿಕೆಯಡಿ ನೂತನ ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ಕ್ರಮಕೈಗೊಳ್ಳಬೇಕು ಎಂದರು.

ಅಂಗನವಾಡಿ ಕೇಂದ್ರಗಳಿಗೆ ಕಡ್ಡಾಯ ಶೌಚಾಲಯ, ಕುಡಿಯುವ ನೀರು, ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ಬಾಲ್ಯ ವಿವಾಹ/ಬಾಲ ಕಾರ್ಮಿಕ ಪದ್ಧತಿ ಸಾಮಾಜಿಕ ಪೀಡುಗು ಆಗಿದ್ದು, ಇದರ ನಿರ್ಮೂಲನೆಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಶಾಲಾ ಮುಖ್ಯ ಶಿಕ್ಷಕರು, ಅಂಗನವಾಡಿ, ಆಶಾ ಕಾರ್ಯಕರ್ತೆಯರು ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಸಬೇಕು. ಮಕ್ಕಳ ಸಹಾಯವಾಣಿ ಸಂಖ್ಯೆ 1098 ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಬೇಕೆಂದರು.

ಜಿಲ್ಲೆಯಲ್ಲಿ ಬಾಲಕಿಯರು ಗರ್ಭಿಣಿಯರಾಗುತ್ತಿರುವ ಪ್ರಕರಣಗಳು ಪತ್ತೆಯಾಗುತ್ತಿವೆ.

116 ಬಾಲ್ಯ ವಿವಾಹಗಳ ತಡೆದ, 90 ಪೋಕ್ಸೋ ಪ್ರಕರಣಗಳನ್ನು ದಾಖಲಿಸಿದ ಬಗ್ಗೆ ಮಾಹಿತಿ ಇದೆ. ಈ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮಕೈಗೊಳ್ಳಬೇಕೆಂದರು. ಮೊದಲನೇ ಮತ್ತು ಮೂರನೇ ಶನಿವಾರ ಸ್ವಚ್ಛತಾ ಶನಿವಾರ ಅಭಿಯಾನ ಕೈಗೊಂಡು, ಗ್ರಾಪಂ, ತಾಪಂ, ಜಿಪಂ ಕಚೇರಿಗಳನ್ನು ಸ್ವಚ್ಛಗೊಳಿಸಬೇಕೆಂದರು.

ಭೂ ವಿಜ್ಞಾನ ಇಲಾಖೆಯೊಂದಿಗೆ ಒಗ್ಗೂಡಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಮರಳು ಬ್ಲಾಕಗಳನ್ನು ಗುರುತಿಸಿ, ಗ್ರಾಮ ಪಂಚಾಯತಿಯಿಂದ ರಾಯಲ್ಟಿ ಶುಲ್ಕ ವಸೂಲಿ ಮಾಡಬೇಕು ಎಂದು ಸೂಚನೆ ನೀಡಿದರು.

ಮನರೇಗಾ ಯೋಜನೆ: ಮನರೇಗಾ ಯೋಜನೆಗೆ ಸಂಬಂಧಿಸಿದಂತೆ ಪ್ರತಿ ವಾರ ಸಾಮಾಜಿಕ ಲೆಕ್ಕ ಪರಿಶೋಧನೆ ಸಭೆ ಕೈಗೊಂಡು, ಪ್ರಕರಣಗಳ ತಿರುವಳಿ, ವಸೂಲಾತಿಗೆ ಕ್ರಮಕೈಗೊಳ್ಳಬೇಕು. ಸಾರ್ವಜನಿಕರ ಅನುಕೂಲಕ್ಕಾಗಿ ಎಲ್ಲಾ ತಾಲೂಕುಗಳಲ್ಲಿ ಕಾಮಗಾರಿ ಮುಕ್ತಾಯ ದಿನಾಂಕ ನಮೂದಿಸಿ ಪ್ರಗತಿ ಸಾಧಿಸಬೇಕು ಎಂದು ಸೂಚನೆ ನೀಡಿದರು.

ಸಹಾಯವಾಣಿ ಕೇಂದ್ರ ಪ್ರಾರಂಭ: ಜಿಲ್ಲಾ ಪಂಚಾಯತ ಕಾರ್ಯಾಲಯದಲ್ಲಿ ಸ್ಥಾಪಿಸಿರುವ ಸಾರ್ವಜನಿಕ ಕುಂದುಕೊರತೆ ಘಟಕದ ಪೋಸ್ಟರನ್ನು ಇದೆ ವೇಳೆ ಸಿಇಓ ಅವರು ಬಿಡುಗಡೆಗೊಳಿಸಿದರು.

ಸಾರ್ವಜನಿಕರು ಸಹಾಯವಾಣಿ 08532–230539 ಸಂಖ್ಯೆಗೆ ಕರೆ ಮಾಡಬಹುದು. ನರೇಗಾ ಕಾಮಗಾರಿ ಸ್ಥಳಗಳಲ್ಲಿ ಕೂಲಿಕಾರರಿಗೆ ಈ ಕುರಿತು ಮಾಹಿತಿ ನೀಡಬೇಕೆಂದು ಸಿಇಓ ಅವರು ಸೂಚನೆ ನೀಡಿದರು.

ಈ ವೇಳೆ ಜಿಪಂ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಜಿಪಂ ಮುಖ್ಯ ಯೋಜನಾಧಿಕಾರಿಗಳಾದ ಟಿ. ರೋಣಿ, ಯೋಜನಾ ನಿರ್ದೇಶಕರಾದ ಶರಣಬಸವರಾಜ್, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ ಹಾಗೂ ವಿವಿಧ ತಾಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು (ಗ್ರಾ.ಉ), (ಪಂ.ರಾ), ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ಜಿಪಂ ಸಿಬ್ಬಂದಿ ಸಭೆಯಲ್ಲಿ ಇದ್ದರು.

# ಸಣ್ಣ ಕೈಗಾರಿಕೆಗಳ ಸ್ಥಾಪನೆಯಿಂದ ಆರ್ಥಿಕ ವೃದ್ಧಿ, ಉದ್ಯೋಗ ಸೃಷ್ಟಿ: ಎಸ್.ಕಮಲ್ ಕುಮಾರ್ ಸಲಹೆ

ವಿ.ಲಕ್ಷ್ಮೀರೆಡ್ಡಿ ಮಾತನಾಡಿ, ಹೈದ್ರಾಬಾದ್ ಕರ್ನಾಟಕ ಪ್ರದೇಶದಲ್ಲಿನ ಕೈಗಾರಿಕೆಗಳಿಗೆ ಅನುಕೂಲತೆಗಳು ತೀರ ಕಡಿಮೆಯಿದ್ದು, ಈ ಭಾಗದ ಕೈಗಾರಿಕೆಗಳ ಅಭಿವೃದ್ಧಿಗೆ ಲೀನ್ ಯೋಜನೆ, ಝಡ್ ಇಡಿ ಮತ್ತು ರಫ್ತು ಪ್ರಕ್ರಿಯೆ ಅತ್ಯಂತ ಮಹತ್ವದ ಪಾತ್ರ ವಹಿಸುತ್ತದೆ. ಯುವಕರು ಈ ಕಾರ್ಯಾಗಾರವನ್ನು ಸದುಪಯೋಗ ಪಡೆದುಕೊಂಡರೇ ಇನ್ನೂ ಹೆಚ್ಚಿನ ಅಭಿವೃದ್ಧಿಯನ್ನು ಕೈಗಾರಿಕೆಗಳಲ್ಲಿ ಕಾಣಬಹುದಾಗಿದೆ ಎಂದರು.

ಇದೇ ವೇಳೆ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಸಮಾಲೋಚಕ ಸತೀಶ ಕೋಟಾ, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಕುರಿತು ಉಪನ್ಯಾಸ ನೀಡಿ, ವ್ಯಾಪಾರ ಎನ್ನುವುದು ಕೇವಲ ಹೂಡಿಕೆ ಮತ್ತು ಲಾಭ ಗಳಿಸುವುದು ಮಾತ್ರವಲ್ಲಣ ಇತರೆ ದೇಶಗಳೊಂದಿಗೆ ಸಂಪರ್ಕ ಸಾಧಿಸುವ ಮತ್ತು ಆ ದೇಶಗಳಿಗೆ ಉತ್ಪನ್ನಗಳನ್ನು ರಫ್ತು ಮಾಡುವುದು ಕೂಡ ವ್ಯಾಪಾರದಲ್ಲಿ ಬಹುಮುಖ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಆಸಕ್ತ ಕೈಗಾರಿಕೋದ್ಯಮಿಗಳು ಮುಂದೆ ಬಂದರೆ ಸಂಸ್ಥೆಯಿಂದ ರಫ್ತು ಉತ್ತೇಜನಕ್ಕೆ ಸಹಕಾರ ನೀಡಲಾಗುವುದು. ಹೆಚ್ಚಾಗಿ ಯುವಕರು ಈ ಯೋಜನೆಯನ್ನು ಸದುಪಯೋಗ ಪಡೆದುಕೊಳ್ಳಲು ಮುಂದಾಗಬೇಕು ಎಂದರು.

ಸಂಪನ್ಮೂಲ ವ್ಯಕ್ತಿಗಳು ಹಾಗೂ ನವ ಟ್ರೈಸ್ ಟ್ರೇಡ್‌ನ ಅಧ್ಯಕ್ಷರಾದ ಸತೀಶ್ ಕೋಟೆ ಅವರು ದೇಶದಲ್ಲಿನ ರಫ್ತು ಮತ್ತು ಆಮದುಗಳ ಬಗ್ಗೆ ಪ್ರಾತ್ಯಕ್ಷಿಕೆಯ ಮೂಲಕ ಮಾಹಿತಿ ನೀಡಿ ಅದರ ಉಪಯುಕ್ತತೆಯನ್ನು ಮತ್ತು ಅದರ ಪ್ರಯೋಜನೆಯನ್ನು ತಿಳಿಸಿದರು.ಇನ್ನೋರ್ವ ಸಂಪನ್ಮೂಲ ವ್ಯಕ್ತಿಗಳಾದ ಜೆಡ್‌ನ ವ್ಯವಸ್ಥಾಪಕರಾದ ಸತೀಶ್ ಅವರು ಎಂ.ಎಸ್.ಎಂ.ಇ ಉದ್ಯಮ ನೋಂದಣಿ ಮತ್ತು ಉದ್ಯಮಿದಾರರಿಗೆ ಅದರ ಹಿನ್ನೆಲೆಯ ಮಾಹಿತಿ ತಿಳಿಸಿದರು.ಇದೇ ಸಂದರ್ಭದಲ್ಲಿ ರಾಯಚೂರು ಜಿಲ್ಲಾ ಅಕ್ಕಿ ಗಿರಣಿ ಮಾಲೀಕರ ಸಂಘದ ಅಧ್ಯಕ್ಷರಾದ ಮಾರೆಮ್ ತಿಪ್ಪಣ್ಣ, ಉಪಾಧ್ಯಕ್ಷರಾದ ನಿಂಗಣ್ಣ ಎಸ್.ಬಿರಾದಾರ, ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುಡೇದ, ಜಂಟಿ ಕಾರ್ಯದರ್ಶಿಗಳಾದ ಕೇಶವ ಮೂರ್ತಿ (ಕಿರಣ್), ಗ್ರಾಮೀಣ ಜಂಟಿ ಕಾರ್ಯದರ್ಶಿಗಳಾದ ದಿನೇಶ್ ಕುಮಾರ್ ವಿ. ಹಾಗೂ ಸಿಡ್‌ಬೀ ಬ್ಯಾಂಕ್‌ನ ವ್ಯವಸ್ಥಾಪಕರಾದ ಲವ ಕುಮಾರ್ ಹಾಗೂ ವಿವಿಧ ಕೈಗಾರಿಕೋದ್ಯಮಿದಾರರು, ಮತ್ತು ಹಲವು ಬ್ಯಾಂಕ್‌ಗಳ ವ್ಯವಸ್ಥಾಪಕರು ಸೇರಿದಂತೆ ಇತರರು ಇದ್ದರು.

# ಅ.3 ರಂದು ಚುಸಾಪ ಕಾರ್ಯ ಚಟುವಟಿಕೆಗಳ ಉದ್ಘಾಟನೆ ಹಾಗೂ ಪದಗ್ರಹಣ: ಮಹ್ಮದ್ ಮುಜೀಬ್

ನರಸಿಂಗ್ ರಾವ್ ಸರ್ಕಿಲ್ ದೇವದುರ್ಗ ಜಿಲ್ಲಾಧ್ಯಕ್ಷರು ಚುಸಾಪ ಅಧ್ಯಕ್ಷತೆಯನ್ನು ವಹಿಸುವರು. ಮಾನ್ವಿ ಚುಸಾಪ ಅಧ್ಯಕ್ಷ ಮಹ್ಮದ್ ಮುಜೀಬ್ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ. ಸಾಹಿತಿ, ಕಲಾವಿದ ಆನಂದ ಜೂಕೂರು ಉಪನ್ಯಾಸ ಮಾಡಲಿದ್ದಾರೆ. ಕ.ರಾ.ಸ.ನೌ.ಸಂಘ ಮಾನ್ವಿ ಅಧ್ಯಕ್ಷ ಸುರೇಶ ಕುರ್ಡಿ, ಬಿಸಿಎಂ ಅಧಿಕಾರಿ ಬಾಗಯ್ಯನಾಯಕ, ಮಹಾದೇವಪ್ಪ ನಿವೃತ್ತ ಶಿಕ್ಷಕರು, ಸಂಗಮೇಶ ಮುಧೋಳ ಅಧ್ಯಕ್ಷರು ಕ.ರಾ.ಪ್ರ.ಶಾ.ಶಿ. ಸಂಘ ಮಾನ್ವಿ, ಮೂಕಪ್ಪ ಕಟ್ಟಿಮನಿ ಮಾಜಿ ಅಧ್ಯಕ್ಷರು ಕ.ಸಾ.ಪ. ಮಾನ್ವಿ, ಬಸವರಾಜ ಬ್ಯಾಗವಾಟ ಚುಸಾಪ ಜಿಲ್ಲಾ ಕಾರ್ಯದರ್ಶಿ, ಜಿಲ್ಲಾ ಚುಸಾಪ ಉಪಾಧ್ಯಕ್ಷ ಬಸವರಾಜ ಭೋಗಾವತಿ, ಮಧು ಪಾಂಡೆ ನಿವೃತ್ತ ಶಿಕ್ಷಕಿ ಭಾಗವಹಿಸಲಿದ್ದಾರೆ.

# ರಾಹುಲ್ ಪಾದಯಾತ್ರೆಗೆ ಅವಕಾಶ ಕೊಟ್ಟರೆ ಹೋರಾಟ

ರ್‍ಯಾಲಿ ಮಾಡಿ ಅದೇನು ಕಡಿದು ಕಟ್ಟೆ ಹಾಕುತ್ತಾರೆ ನಾವು ನೋಡುತ್ತೇವೆ ಎಂದು ವಿಜಯೇಂದ್ರ ಹೇಳಿದರು.

ಕಾಂಗ್ರೆಸ್ ಪಕ್ಷ ಮೂರ್ಖರ ಪಕ್ಷ ಎಂದು ಟೀಕಿಸಿದ ಅವರು, ಚುನಾವಣಾ ಆಯೋಗದ ಮೇಲೆ ಅನುಮಾನ ವ್ಯಕ್ತಪಡಿಸುವುದು ಮೂರ್ಖತನ ಪರಮಾವಧಿ. ದಾಖಲೆ ಇದ್ದರೆ ಕಾಂಗ್ರೆಸ್‌ನವರು ನ್ಯಾಯಾಲಯಕ್ಕೆ ಕೊಡಲಿ. ಈ ರೀತಿ ಹುಚ್ಚಾಟ, ರಂಪಾಟ ಅಪಾಯಕಾರಿ ಬೆಳವಣಿಗೆ ಎಂದರು

ಸಾಂವಿಧಾನಿಕ ಸಂಸ್ಥೆಗಳ ಮೇಲೆ ಅನುಮಾನ ವ್ಯಕ್ತಪಡಿಸುವುದು ಅಕ್ಷಮ್ಯ. ದೇಶದ ಜನರಲ್ಲಿ ಗೊಂದಲ ಮೂಡಿಸುವ ಕೆಲಸವನ್ನು ಕಾಂಗ್ರೆಸ್ ನಡೆಸಿದೆ ಎಂದು ವಿಜಯೇಂದ್ರ ಟೀಕಿಸಿದರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**

**9743497111 9743496111**

# ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ವತಿಯಿಂದ ಪರಿಸರ ಮಾಹಿತಿ ಮತ್ತು ಜಾಗೃತಿ ಕಾರ್ಯಕ್ರಮ

ಯುವ ಮಾರ್ಗ ಸುದ್ದಿ

**ಅರಕೇರಾ,ಜು.31–**ಪರಿಸರವನ್ನು ಕಾಪಾಡಿದರೆ ಸಕಲ ಜೀವ ರಾಶಿಗಳು ಸೌಖ್ಯದಿಂದ ಬದುಕಲು ಸಾಧ್ಯ ಎಂದು ಎಸ್.ಕೆ.ಡಿ. ಆರ್.ಡಿ.ಪಿ ಕೃಷಿ ಅಧಿಕಾರಿ ಹುಚ್ಚಪ್ಪ ಹೇಳಿದರು.

ಸಮೀಪದ ಚಿಕ್ಕಹೊನ್ನಕುಣಿ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದಿನಮದ ಹಮ್ಮಿಕೊಂಡಿದ್ದ ಪರಿಸರ ಮಾಹಿತಿ ಮತ್ತು ಜಾಗೃತಿ ಕಾರ್ಯಕ್ರಮದಲ್ಲಿ ಸಸಿಗೆ ನೀರೆರೆದು ಬುಧವಾರ ಮಾತನಾಡಿದರು.

ಭೂಮಂಡಲದಲ್ಲಿ ಪ್ರತಿಯೊಂದು ಜೀವಿ ಉಸಿರಾಟಕ್ಕೆ ಮುಖ್ಯವಾಗಿ ಪ್ರಾಣ ವಾಯು ಪರಿಸರದಿಂದ ಲಭ್ಯವಿದೆ. ಪರಿಸರವು ಸ್ವಚ್ಛ ಸುಂದರವಾಗಿ ಇಟ್ಟುಕೊಳ್ಳಬೇಕು ಎಂದರು.

ಮುಖ್ಯ ಶಿಕ್ಷಕ ಕನಕಪ್ಪ ಮಾತನಾಡಿ, ಮರಗಳು, ಗಿಡಗಳು, ಕಾಡುಗಳು, ನದಿಗಳು ಮತ್ತು ಎಲ್ಲವೂ ನಮ್ಮ ನೈಸರ್ಗಿಕ ಪರಿಸರ.



ಭೂಮಿಯ ಮೇಲಿನ ಜೀವನವು ಆರೋಗ್ಯಕರ ಪರಿಸರವನ್ನು ಅವಲಂಬಿಸಿರುತ್ತದೆ. ಆದಕಾರಣ ಮಕ್ಕಳು ತಮ್ಮ ಶಾಲೆ, ಮನೆ ಅಂಗಳದಲ್ಲಿ ಒಂದು ಸಸಿಯನ್ನು ನೆಟ್ಟು ಪೋಷಿಸಿದರೆ ಉತ್ತಮ ವಾತಾವರಣ ಸಿಗುತ್ತದೆ ಎಂದರು.

ವಲಯ ಮೇಲ್ವಿಚಾರಕ ಮಂಜಯ್ಯ, ಶಿಕ್ಷಕರಾದ ಅಂಜಿನಯ್ಯ, ಪ್ರಸನ್ನ, ಶಕುಂತಲಾ, ರೂಪ, ರೆಡ್ಡಿಸಾಬ, ಸೇವಾ ಪ್ರತಿನಿಧಿಗಳಾದ ಶ್ರೀದೇವಿ, ಮಾನಶಪ್ಪ, ವಿಎಲ್ಇ ಯುವರಾಜ ಇದ್ದರು.

# ಸರ್ಕಾರದಿಂದ ದಲಿತ ವಿರೋಧಿ ನೀತಿ ಸಿದ್ದರಾಮಯ್ಯ ವಿರುದ್ಧ ಬಿಎಸ್ಪಿ ಆಕ್ರೋಶ




**ಬೀದರ,ಜು.31–** ನಗರದಲ್ಲಿ ಬಹುಜನ ಸಮಾಜ ಪಕ್ಷದ ಜಿಲ್ಲಾ ಮಟ್ಟದ ಸಭೆ ಜರುಗಿತು. ಸಭೆಯಲ್ಲಿ ಅಹಿಂದ ಹೆಸರಿನಲ್ಲಿ ಅಧಿಕಾರಕ್ಕೆ ಬಂದ ಮುಖ್ಯಮಂತ್ರಿ ಸಿದ್ದರಾಮಯ್ಯ ದಲಿತ ಅಧಿಕಾರಿಗಳ ವಿರುದ್ಧ ಅಧಿಕಾರ ಚಲಾಯಿಸುತ್ತಿದ್ದಾರೆ ಎಂದು ಬಹುಜನ ಸಮಾಜ ಪಕ್ಷದ ರಾಜ್ಯಾಧ್ಯಕ್ಷ ಡಾ.ಎಂ. ಕೃಷ್ಣಮೂರ್ತಿ ಆಕ್ರೋಶ ವ್ಯಕ್ತಪಡಿಸಿದರು.

ಬೀದರ್ ನಗರದ ಪಟ್ಟಣದಲ್ಲಿ ಸೋಮವಾರ ಬಹುಜನ ಸಮಾಜ ಪಕ್ಷದಿಂದ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿ, ರಾಜ್ಯದಲ್ಲಿ ಎಸ್ಸಿ, ಎಸ್ಟಿ ಅಧಿಕಾರಿಗಳಿಗೆ ಮುಂಬಡ್ತಿ ನೀಡದೆ ವಿರೋಧಿ ನೀತಿ ತೋರುತ್ತಿದೆ. ಸಿದ್ದರಾಮಯ್ಯ ಸರ್ಕಾರ ಅಹಿಂದ ಹೆಸರಿನಲ್ಲಿ ಎಸ್ಸಿ, ಎಸ್ಟಿಗಳ ಶೇ.90 ಮತ ಪಡೆದು ಬಹುಮತದಿಂದ ರಚನೆ ಆಗಿದೆ. ದಲಿತರ ಮತ ಪಡೆದ ಸಿದ್ದರಾಮಯ್ಯ ಭಾಷಣಕ್ಕೆ ಮಾತ್ರ ದಲಿತರನ್ನು ಸೀಮಿತ ಮಾಡಿಕೊಂಡಿದ್ದಾರೆ. ಕೋಲಾರ ಜಿಲ್ಲೆ ಹೊರತುಪಡಿಸಿ ಎಲ್ಲಿಯೂ ಒಬ್ಬರೂ ಎಸ್ಸಿ, ಎಸ್ಟಿ ಜಿಲ್ಲಾಧಿಕಾರಿ ಇಲ್ಲ. ಹಾಗಾದರೆ ದಲಿತರಿಗೆ ಜಿಲ್ಲಾಧಿಕಾರಿ ಆಗಿ ಅಧಿಕಾರ ಪಡೆಯುವ ಅರ್ಹತೆ ಇಲ್ಲವೇ ಎಂದು ಪ್ರಶ್ನಿಸಿದರು.

ದಲಿತರನ್ನು ಮೂಲೆ ಗುಂಪು ಮಾಡುವುದು ಗೌರವ ತರಲಿದೆಯೇ ಎಂದು ಮುಖ್ಯಮಂತ್ರಿ ಅವರನ್ನು ಪ್ರಶ್ನಿಸಿದ ಅವರು, ನೀವು ಅಹಿಂದ ಎಂದು ಹೇಳಲು ಶಕ್ತರೇ? ನಿಮಗೆ ದಲಿತರ ಪರ ಎಂದು ಹೇಳಲು ಯಾವ ನೈತಿಕತೆ ಇದೆ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಕೇಂದ್ರದಲ್ಲಿ ಈ ಬಗ್ಗೆ ಮಾತನಾಡದೇ ಸುಮ್ಮನಿದ್ದಾರೆ ಎಂದು ಕಿಡಿಕಾರಿದರು.

ಸಾಮಾನ್ಯ ಕೆಟಗರಿಯ 288 ಜನರನ್ನು ಪದವಿ ಪೂರ್ವ ಕಾಲೇಜಿಗೆ ಪ್ರಾಂಶುಪಾಲರಾಗಿ ನೇಮಕ ಮಾಡಿದ್ದಾರೆ. 80 ಜನ ಎಸ್ಸಿ, ಎಸ್ಟಿಯವರು ಸಮಿತಿಯ ನರೇಂದ್ರ ಸ್ವಾಮಿ ಅವರ ಮಾಹಿತಿಯನ್ನು ಪರಿಗಣಿಸದೆ ಸರ್ಕಾರ ದಲಿತರ ವಿರೋಧಿ ನೀತಿ ತೋರಿದೆ. ಸಿದ್ದರಾಮಯ್ಯ ಆಪ್ತ ಕೆ.ಜೆ.ಜಾರ್ಜ್ ಸಚಿವರಾಗಿರುವ ಇಂಧನ ಇಲಾಖೆಯಲ್ಲಿ 160 ಎಸ್ಸಿ, ಎಸ್ಟಿ ಸಹಾಯಕ ಇಂಜಿನಿಯರ್ಸ್‌ಗಳಿಗೆ ಬಡ್ತಿ ನೀಡದೆ ವಂಚಿಸಲಾಗುತ್ತಿದೆ ಎಂದು ಆರೋಪಿಸಿದರು.

ಕೃಷಿ ಇಲಾಖೆಯಲ್ಲಿ ಸುಮಾರು 50 ಅಧಿಕಾರಿಗಳಿಗೆ ಬಡ್ತಿ ನೀಡಿಲ್ಲ. ತೋಟಗಾರಿಕೆ ಇಲಾಖೆಯಲ್ಲಿ ಸಹಾಯಕ ತೋಟಗಾರಿಕೆ ನಿರ್ದೇಶಕರ ಹುದ್ದೆಗೆ ಬಡ್ತಿ ನೀಡುವಾಗ ರೋಸ್ಟರ್ ಪದ್ಧತಿ ಅಳವಡಿಸಿಕೊಳ್ಳದೆ ನೌಕರರಿಗೆ ವಂಚನೆ ಮಾಡಲಾಗಿದೆ. ಪರಮೇಶ್ವರ್ ಅವರೇ ಗೃಹಮಂತ್ರಿಯಾಗಿದ್ದರೂ ಉತ್ತರ ಕನ್ನಡ ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿ ವಿವಿಧ ವೃಂದಗಳಿಗೆ ಬಡ್ತಿ ನೀಡುವಾಗ ನೌಕರರಿಗೆ ಅನ್ಯಾಯ ಮಾಡಲಾಗಿದೆ ಎಂದರು.

ಬಿಎಸ್ಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ನಾಗರಾಜ್ ಮಾತನಾಡಿ, ಅಹಿಂದ, ಬಡವರ ಪರ ಎಂದು ಹೇಳಿ ಜನರಿಗೆ ಮೋಸ ಮಾಡಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಇದೀಗ ದಲಿತರ ವಿರೋಧಿಗಳು ಎಂಬುದನ್ನು ಬಿಂಬಿಸುತ್ತಿದ್ದಾರೆ ಎಂದು ಆರೋಪಿಸಿದರು. ಬಹುಜನ ಸಮಾಜ ಪಕ್ಷ ಮುಂದಿನ ದಿನಗಳಲ್ಲಿ ರಾಜ್ಯಪಾಲರಿಗೆ ಮನವಿ ಸಲ್ಲಿಸಿ ಎಸ್ಸಿ, ಎಸ್ಟಿಯವರಿಗೆ ಆಗಿರುವ ಅನ್ಯಾಯ ಸರಿಪಡಿಸುವಂತೆ ಒತ್ತಾಯಿಸಿ ರಾಜ್ಯಪಾಲರನ್ನು ಭೇಟಿ ಮಾಡಿ ಮನವಿ ಸಲ್ಲಿಸಲು ನಿರ್ಧರಿಸಿದೆ ಎಂದರು

ಈ ಸಭೆಯಲ್ಲಿ ಸೆಂಟ್ರಲ್ ಸ್ಟೇಟ್ ಕೋಆರ್ಡಿನೇಟರ್ ಆದ ಅಥರ್ ಸಿಂಗ್ ರಾವ್, ಇನ್ನೋರ್ವ ಸೆಂಟ್ರಲ್ ಸ್ಟೇಟ್ ಕೋಆರ್ಡಿನೇಟರ್ ಆದ ಮಾನ್ಯ ಕಲ್ಲಪ್ಪ ಆರ್ ತೊರವಿ, ರಾಜ್ಯ ಉಸ್ತುವಾರಿಗಳಾದ ಮಾನ್ಯ ಗಂಗಾಧರ್ ಬಹುಜನ್, ರಾಜ್ಯಾಧ್ಯಕ್ಷರಾದ ಒ. ಕೃಷ್ಣಮೂರ್ತಿ, ಎಲ್ ಆರ್ ಬೋಸ್ಲೆ, ಮಹಾದೇವ ಧನ್ನಿ, ಅಶೋಕ್ ಮಂಠಳಕರ್ ,ಶಕ್ತಿ ಕಾಂತ್ ಭಾವಿಡೊಡ್ಡಿ, ಅಂಬಾದಾಸ್ ಚಕ್ರವರ್ತಿ, ಮಹೇಶ್ ಬೋಲಾ, ಉತ್ತಮ ಸುತಾರ, ಜಾಫರ್ ಖುರೇಷಿ, ಸಚಿನ್ ಗಿರಿ, ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು ಎಂದು ಜಿಲ್ಲಾಧ್ಯಕ್ಷರಾದ ಕಪಿಲ್ ಗೋಡಬೊಲೆ ಅವರು ತಿಳಿಸಿದ್ದಾರೆ.

# ಮಾನವ ಕಳ್ಳ ಸಾಗಾಣಿಕೆ ಸಮಾಜಕ್ಕೆ ಮಾರಕ: ಸಿಇಓ ಡಾ. ಗಿರೀಶ್ ಬದೋಲೆ

**ಬೀದರ, ಜು.31–** ಮಾನವ ಕಳ್ಳ ಸಾಗಾಣಿಕೆ ಸಮಾಜಕ್ಕೆ ಮಾರಕವಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ಗಿರೀಶ್ ಬದೋಲೆ ಅವರು ತಿಳಿಸಿದರು.ಅವರು ಬುಧವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆಯ ಅಂಗವಾಗಿ ಜಿಲ್ಲಾ ಮಟ್ಟದ ಒಂದು ದಿನದ ಕಾರ್ಯಾಗಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಾನವ ಕಳ್ಳ ಸಾಗಾಣಿಕೆ ಒಂದು ಕಾನೂನು ಬಾಹಿರ ಮತ್ತು ಅಸಂವಿಧಾನಿಕ ಚಟುವಟಿಕೆಯಾಗಿದೆ. ಸಂವಿಧಾನದ 21ನೇ ವಿಧಿಯು ಭಾರತದ ಪ್ರತಿಯೊಬ್ಬ ಪ್ರಜೆಗಳಿಗೆ ಸ್ವಾತಂತ್ರ್ಯವಾಗಿ ಜೀವಿಸುವ ಹಕ್ಕು ನೀಡಿದೆ ಹಾಗೂ 23ನೇ ವಿಧಿಯು ಮಾನವ ಕಳ್ಳ ಸಾಗಾಣಿಕೆ ಅಪರಾಧ ಎಂದು ತಿಳಿಸುತ್ತದೆ. ಭಾರತ ಸರ್ಕಾರವು ಮಾನವ ಕಳ್ಳ ಸಾಗಾಣಿಕೆ ತಡೆ ಕಾಯ್ದೆ 1956 ನ್ನು ಜಾರಿಗೆ ತಂದಿದೆ. ಆದರೂ ಕೂಡ ಮಾನವ ಕಳ್ಳ ಸಾಗಾಣಿಕೆ ಆಗುತ್ತಿರುವುದು ಗಂಭೀರದ ವಿಷಯವಾಗಿದೆ ಎಂದರು.ಕಾಣೆಯಾದವರ ಬಗ್ಗೆ ದೂರ ನೀಡಲು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾವಲು ಸಮಿತಿ ಇರುತ್ತದೆ ಅಲ್ಲಿ ಕೂಡ ದೂರ ನೀಡಬಹುದು ಮತ್ತು ಪೊ?ಲಿಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಯಾವಾಗಲೂ ಸಾರ್ವಜನಿಕರ ಸಹಾಯಕ್ಕೆ ಇರುತ್ತದೆ. ಮಾನವ ಕಳ್ಳ ಸಾಗಾಣಿಕೆಯನ್ನು ತಡೆದು ಮಾನವ ಕಳ್ಳ ಸಾಗಾಣಿಕೆ ಮುಕ್ತ ಜಿಲ್ಲೆಯಾಗಲು ಎಲ್ಲಾ ಇಲಾಖೆಯ ಅಧಿಕಾರಿಗಳು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದರು.

ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರು



ಮಾತನಾಡಿ, ಮಾನವ ಕಳ್ಳ ಸಾಗಾಣಿಕೆಯಲ್ಲಿ ಮಹಿಳೆಯರು, ಮಕ್ಕಳು ಮತ್ತು ಇತರರು ಒಳಗೊಡಿರುತ್ತಾರೆ. ಮಹಿಳೆಯರನ್ನು ಬೇರೆ ಸ್ಥಳಗಳಿಗೆ ಸಾಗಾಣಿಕೆ ಮಾಡಿ ವೇಶ್ಯಾವಾಟಿಕೆ ಅಂತಹ ಸಮಾಜದ ಕೆಟ್ಟ ಚಟುವಟಿಕೆಗಳಲ್ಲಿ ಬಳಸಿಕೊಳ್ಳುತ್ತಿದ್ದಾರೆ ಮತ್ತು ಮಕ್ಕಳನ್ನು ಭಿಕ್ಷಾಟನೆಯಲ್ಲಿ ಹಾಗೂ ಇತರರನ್ನು ದೇಹದಲ್ಲಿ ಇರುವ ಅಂಗಾಂಗಗಳನ್ನು ತೆಗೆದುಕೊಂಡು ಬೇರೆಯವರಿಗೆ ಮಾರಾಟ ಮಾಡುತ್ತಾರೆ ಮತ್ತು ಕಾರ್ಖಾನೆಗಳಲ್ಲಿ ಕೆಲಸಕ್ಕೆ ಬಳಸಿಕೊಳ್ಳುತ್ತಾರೆ. ಆದ್ದರಿಂದ ಇಂತಹ ಹೀನ ಕೃತ್ಯಗಳಿಂದ ಜನರನ್ನು ಕಾಪಾಡಬೇಕು ಎಂದರು.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ್ ಅರ್ಜುನ್ ಬನಸೋಡೆ ಅವರು ಮಾತನಾಡಿ, ಮಾನವ ಕಳ್ಳ ಸಾಗಾಣಿಕೆಯಲ್ಲಿ ಮಹಿಳೆಯರು ಮತ್ತು ಮಕ್ಕಳನ್ನು ಹೆಚ್ಚು ಸಾಗಾಣಿಕೆ ಮಾಡುತ್ತಾರೆ ಮಹಿಳೆಯರನ್ನು ಅನೈತಿಕ ಚಟುವಟಿಕೆಗಳಲ್ಲಿ ಮತ್ತು ಮಕ್ಕಳನ್ನು ಭಿಕ್ಷಾಟನೆ, ಬಾಲ ಕಾರ್ಮಿಕ ಅಂತಹ ಕೃತ್ಯಗಳಲ್ಲಿ ಬಳಸಿಕೊಳ್ಳುತ್ತಿದ್ದಾರೆ ಆದ್ದರಿಂದ ಇಂತಹ ಹೀನ ಕೃತ್ಯಗಳಿಂದ ಮಕ್ಕಳನ್ನು ಮತ್ತು ಮಹಿಳೆಯರನ್ನು ಕಾಪಾಡಬೇಕು ಹಾಗೂ ಇದಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದರು.

# ಧರ್ಮಸ್ಥಳ 2 ಅಸ್ಥಿ ಪಂಜರ ಪತ್ತೆ

**ಮಂಗಳೂರು,ಜು.31–**ರಾಜ್ಯದಲ್ಲಿ ತೀವ್ರ ಸಂಚಲನ ಸೃಷ್ಟಿಸಿರುವ ಧರ್ಮಸ್ಥಳದ ಅಸಹಜ ಸಾವುಗಳ ಪ್ರಕರಣದ ತನಿಖೆಯನ್ನು ತೀವ್ರಗೊಳಿಸಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ)ದ ಅಧಿಕಾರಿಗಳಿಗೆ ದೂರುದಾರ ಗುರುತಿಸಿದ್ದ 6ನೇ ಪಾಯಿಂಟ್‌ನಲ್ಲಿ ಎರಡು ಅಸ್ಥಿಪಂಜರಗಳು ಪತ್ತೆಯಾಗಿದೆ.

ಕಳೆದ ಮೂರು ದಿನಗಳಿಂದ ಶವಗಳ ಪತ್ತೆಗೆ ಅಗೆಯುವ ಕಾರ್ಯ ನಡೆಯುತ್ತಿದ್ದು,ನಿನ್ನೆ ಸಂಜೆಯವರೆಗೆ ಯಾವುದೇ ಮೃತದೇಹದ ಗುರುತು ಪತ್ತೆಯಾಗಿರಲಿಲ್ಲ.

ಆದರೆ ದೂರುದಾರ ಗುರುತಿಸಿದ ಸ್ಥಳಗಳ 6ನೇ ಜಾಗದಲ್ಲಿ 15 ಕಾರ್ಮಿಕರಿಂದ ಉತ್ಖನನ ನಡೆಯುತ್ತಿದ್ದು, ಎರಡು ಅಸ್ಥಿಪಂಜರಗಳು ಪತ್ತೆಯಾಗಿದೆ.

ಅಸ್ಥಿಪಂಜರದ ದೇಹದ ಪೂರ್ತಿ ಭಾಗಗಳು ಸಿಕ್ಕಿಲ್ಲ, ಕೆಲವು ಭಾಗಗಳು ಮಾತ್ರ ಸಿಕ್ಕಿದ್ದು, ಇನ್ನೂ ಆಳಕ್ಕೆ ತೆಗೆದು ಹುಡುಕಾಟ ನಡೆಸಲಾಗುತ್ತಿದೆ. ಇನ್ನೂ ಇದಾದ ಬಳಿಕ 7 ಹಾಗೂ 8ನೇ ಪಾಯಿಂಟ್‌ನಲ್ಲಿ ಉತ್ಖನನ ಕಾರ್ಯ ನಡೆಸುವ ಸಾಧ್ಯತೆಗಳಿವೆ. ದೂರುದಾರ ನಿನ್ನೆ ಗುರುತಿಸಿರುವ ಪಾಯಿಂಟ್ ನಂಬರ್ 2 ರಿಂದ 5ರವರೆಗೆ 4 ರಿಂದ 6 ಅಡಿ ಮಣ್ಣು ಅಗೆಯಲಾಗಿದೆ. ಈ ವೇಳೆ ಶವಗಳನ್ನು ಹೂತಿರುವ ಯಾವುದೇ ಕುರುಹುಗಳು ಪತ್ತೆಯಾಗಿರಲಿಲ್ಲ.

ಇನ್ನು ದೂರುದಾರ ಗುರುತಿಸಿರುವ ಪಾಯಿಂಟ್ ನಂಬರ್ 13ರತ್ತ ಎಲ್ಲರ ಚಿತ್ತ ನೆಟ್ಟಿದೆ. ಅಲ್ಲಿ ಹಲವಾರು ಶವಗಳನ್ನು ಹೂತಿರುವುದಾಗಿ ದೂರುದಾರ ಹೇಳಿ ದ್ದಾರೆ. ಈ ಪಾಯಿಂಟ್ ನೇತ್ರಾವತಿ ಸ್ನಾನಘಟ್ಟದ ಸಮೀಪದ ಬಯಲಿನಲ್ಲಿದ್ದು, ಇಲ್ಲಿ ಇಂದು ಶೋಧ ನಡೆಸಲಾಗುತ್ತಿದೆ.ಆರನೇ ಜಾಗದಲ್ಲಿ ಶೋಧ ಕಾರ್ಯ ಮುಂದುವರೆದಿದೆ.



ಕಾರ್ಮಿಕರು ಮತ್ತಷ್ಟು ಮೂಳೆಗಳನ್ನು ಹುಡುಕಲು ಮಣ್ಣು ಹೊರಗೆ ಹಾಕುತ್ತಿದ್ದಾರೆ. ಕಾರ್ಮಿಕರು ಈಗಾಗಲೇ ನಾಲ್ಕು ಅಡಿ ಅಗೆದಿದ್ದಾರೆ. ಗುಂಡಿಯ ಮಣ್ಣನ್ನು ಫಾರೆನ್ಸಿಕ್ ಪರಿಶೀಲನೆ ಮಾಡಿದ್ದಾರೆ.

ಪತ್ತೆಯಾಗಿರುವ ಅಸ್ಥಿಪಂಜರಗಳನ್ನು ಸಂಗ್ರಹಿಸಿ ಪರಿಶೀಲನೆ ನಡೆಸಿದ ಬಳಿಕ ಅವುಗಳನ್ನು ವಿಧಿ ವಿಜ್ಞಾನ ಪ್ರಯೋಗಾಲಯದ ಪರೀಕ್ಷೆಗೆ ಕಳುಹಿಸಲು ಎಸ್‌ಐಟಿ ಅಧಿಕಾರಿಗಳು ಸಿದ್ಧತೆ ಕೈಗೊಂಡಿದ್ದಾರೆ. ಅಸ್ಥಿಪಂಜರ ದೊರೆತ ಸ್ಥಳಕ್ಕೆ ಎಸ್ ಐಟಿ ಮುಖ್ಯಸ್ಥ ಪ್ರಣವ್ ಮೊಹಂತಿ ಆಗಮಿಸಿ ಮಾಹಿತಿಯನ್ನು ಪಡೆದಿದ್ದಾರೆ.

ಧರ್ಮಸ್ಥಳದ ನೇತ್ರಾವತಿ ಘಾಟ್ ಬಳಿಯ ಕಾಡುಪ್ರದೇಶದಲ್ಲಿ 1998 ರಿಂದ 2014ರವರೆಗೆ ನೂರಾರು ಮಹಿಳೆಯರು ಮತ್ತು ಮಕ್ಕಳ ಶವಗಳನ್ನು ಹೂತಿಟ್ಟಿದ್ದೇನೆ ಎಂದು ಸ್ವಚ್ಛತಾ ಕಾರ್ಮಿಕ ಅನಾಮಿ ವ್ಯಕ್ತಿ ಆರೋಪಿಸಿದ್ದ. ಈ ಶವಗಳು ಅತ್ಯಾಚಾರ ಮತ್ತು ಕೊಲೆಗೆ ಸಂಬಂಧಿಸಿದವು ಎಂದು ದೂರುದಾರ ತಿಳಿಸಿದ್ದು, ಈ ಆರೋಪದಿಂದ ರಾಜ್ಯಾದ್ಯಂತ ಭಾರೀ ಚರ್ಚೆಗೆ ಕಾರಣವಾಗಿತ್ತು. ರಾಜ್ಯ ಸರ್ಕಾರವು ಜುಲೈ 19, 2025 ರಂದು ಆಂತರಿಕ ಭದ್ರತಾ ವಿಭಾಗದ ಡಿಜಿಪಿ ಡಾ. ಪ್ರಣವ್ ಮೊಹಂತಿ ನೇತೃತ್ವದಲ್ಲಿ ಎಸ್‌ಐಟಿಯನ್ನು ರಚಿಸಿತ್ತು.

**9 ಮಂದಿ ನೇಮಕ**

ಎಸ್‌ಐಟಿಗೆ ಮತ್ತಷ್ಟು ಬಲ ನೀಡಲಾಗಿದ್ದು, ಮತ್ತೆ ಒಂಬತ್ತು ಪೊಲೀಸರನ್ನು ನೇಮಕ ಮಾಡಿ ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಎಂ.ಎ ಸಲೀಂ ಅವರು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಉಪ್ಪಿನಂಗಡಿ ಠಾಣೆಯ ಎಎಸ್‌ಐ ಲಾರೆನ್ಸ್, ವಿಟ್ಲ ಠಾಣೆ ಕಾನ್ಸ್ಟೇಬಲ್ ಮನೋಜ್, ಪುಂಜಾಲಕಟ್ಟೆ ಠಾಣೆ ಕಾನ್ಸ್ಟೇಬಲ್ ಸಂದೀಪ್, ಉಡುಪಿ ಸಿ ಎಸ್ ಪಿ ಪೊಲೀಸ್ ಠಾಣೆಯ ಕಾನ್ಸ್ಟೇಬಲ್ ಲೋಕೇಶ್, ಹೊನ್ನಾವರ ಠಾಣೆಯ ಹೆಡ್ ಕಾನ್ಸ್ಟೇಬಲ್ ಸತೀಶ್ ನಾಯಕ್, ಮಂಗಳೂರು ಹೆಡ್ ಕಾನ್ಸ್ಟೇಬಲ್ ಜಯರಾಮಗೌಡ, ಎಚ್.ಸಿ ಬಾಲಕೃಷ್ಣ ಗೌಡ ನೇಮಕ ಮಾಡಿ ಡಾ. ಎಂ.ಎ ಸಲೀಂ ಆದೇಶ ಹೊರಡಿಸಿದ್ದಾರೆ.

# ಮಾಲೆಂಗಾವ್ ಸ್ಫೋಟ:ಸಾಧ್ವಿ ಸೇರಿ ಎಲ್ಲರೂ ದೋಷ ಮುಕ್ತ

**ಮುಂಬೈ,ಜು.31–**ದೇಶದಾದ್ಯಂತ ದೊಡ್ಡ ಸುದ್ದಿಯಾಗಿದ್ದ ಮಹಾರಾಷ್ಟ್ರದ ಮಾಲೆಂ ಗಾವ್ ಸ್ಫೋಟ ಪ್ರಕರಣದ ಎಲ್ಲ 7 ಆರೋಪಿಗಳನ್ನು ಎನ್‌ಐಎ ವಿಶೇಷ ನ್ಯಾಯಾಲಯ ಖುಲಾಸೆಗೊಳಿಸಿದೆ.

ಈ ಮಾಲೆಂಗಾವ್ ಸ್ಫೋಟ ಪ್ರಕರಣ ದಲ್ಲಿ ಬಿಜೆಪಿಯ ಮಾಜಿ ಸಂಸದೆ ಸಾಧ್ವಿ ಪ್ರಜ್ಞಾಸಿಂಗ್ ಠಾಕೂರ್, ಲೆಫ್ಟಿನೆಂಟ್ ಕರ್ನಲ್ ಪ್ರಸಾದ್ ಪುರೋಹಿತ್ ಸೇರಿದಂತೆ 7 ಆರೋಪಿಗಳನ್ನು ಸಾಕ್ಷ್ಯಾಧಾರ ಕೊರತೆಗಳಿಂದ ಖುಲಾಸೆಗೊಳಿಸಿ ಮುಂಬೈನಲ್ಲಿರುವ ಎನ್‌ಐಎ ವಿಶೇಷ ನ್ಯಾಯಾಲಯದ ನ್ಯಾಯಾಧೀಶರಾದ ನ್ಯಾಯಮೂರ್ತಿ ಎ.ಕೆ ಲಹೋಟಿ ಇಂದು ತೀರ್ಪು ಪ್ರಕಟಿಸಿದ್ದಾರೆ.

ಮಹಾರಾಷ್ಟ್ರ ಕೋಮುಸೂಕ್ಷ್ಮ ಮಾಲೆಂಗಾವ್ ಪಟ್ಟಣದಲ್ಲಿ 17 ವರ್ಷಗಳ ಹಿಂದೆ 2008ರಲ್ಲಿ ಮಸೀದಿ ಬಳಿ ನಿಲ್ಲಿಸಲಾಗಿದ್ದ ಮೋಟಾರ್ ಸೈಕಲ್‌ಗೆ ಬಾಂಬ್ ಇಟ್ಟು ಸ್ಫೋಟಿಸಲಾಗಿತ್ತು. ಸ್ಫೋಟದ ತೀವ್ರತೆಗೆ 6 ಜನ ಮೃತಪಟ್ಟು, 100ಕ್ಕೂ ಹೆಚ್ಚು ಜನ ಗಾಯಗೊಂಡಿದ್ದರು. ಈ ಸ್ಫೋಟಕ್ಕೆ ಆಗ ಸಂಸದರಾಗಿದ್ದ ಸಾಧ್ವಿ ಪ್ರಜ್ಞಾಸಿಂಗ್ ಠಾಕೂರ್ ಸೇರಿದಂತೆ ಹಲವು ಹಿಂದೂಪರ ಸಂಘಟನೆಗಳು ಕಾರಣ ಎಂಬ ಆರೋಪಗಳು ಕೇಳಿ ಬಂದಿದ್ದವು.

ಈ ಸ್ಫೋಟಕ್ಕೆ ಸಾಧ್ವಿ ಪ್ರಜ್ಞಾಸಿಂಗ್ ಠಾಕೂರ್ ಅವರ ಬೈಕನ್ನು ಬಳಸಲಾಗಿದೆ, ಕರ್ನಲ್ ಪ್ರಸಾದ್ ಪುರೋಹಿತ್ ಬಾಂಬ್ ತಯಾರಿಸಿದ್ದಾರೆ ಎಂಬ ಆರೋಪಗಳು ಕೇಳಿ ಬಂದಿದ್ದವು. ಈ ಇಬ್ಬರೂ ಸೇರಿದಂತೆ 7 ಮಂದಿಯನ್ನು ಬಂಧಿಸಲಾಗಿತ್ತು.

ಎನ್‌ಐಎ ವಿಶೇಷ ನ್ಯಾಯಾಲಯ ತೀರ್ಪನ್ನು ಪ್ರಕಟಿಸುವ ಸಂದರ್ಭದಲ್ಲಿ ಮಾಜಿ ಸಂಸದೆ ಸಾಧ್ವಿ ಪ್ರಜ್ಞಾಸಿಂಗ್ ಠಾಕೂರ್, ಲೆಫ್ಟಿನೆಂಟ್ ಕರ್ನಲ್ ಪ್ರಸಾದ್ ಪುರೋಹಿತ್ ಸೇರಿದಂತೆ 7 ಆರೋಪಿಗಳು ಹಾಜರಿದ್ದರು.

ಮಹಾರಾಷ್ಟ್ರದ ಮಾಲೆಂಗಾವ್‌ನಲ್ಲಿ 2008ರಲ್ಲಿ ಈ ಸ್ಫೋಟ ನಡೆದಿದ್ದು, ಈ ಸ್ಫೋಟದಲ್ಲಿ 6 ಮಂದಿ ಮೃತಪಟ್ಟು, ಸರಿಸುಮಾರು 100 ಮಂದಿ ಗಾಯಗೊಂಡಿದ್ದರು.

ಈ ಸ್ಫೋಟಕ್ಕೂ ಹಿಂದೂ ಸಂಘಟನೆಗಳಿಗೂ ಸಂಬಂಧವಿದೆ ಎಂದು ಆರೋಪಿಸಿ ಈ ಪ್ರಕರಣದಲ್ಲಿ ಆಗ ಸಂಸದರಾಗಿದ್ದ ಸಾಧ್ವಿ ಪ್ರಜ್ಞಾಸಿಂಗ್ ಠಾಕೂರ್, ಲೆಫ್ಟಿನೆಂಟ್ ಕರ್ನಲ್ ಪ್ರಸಾದ್ ಪುರೋಹಿತ್ ಸೇರಿದಂತೆ 7 ಮಂದಿಯನ್ನು ಬಂಧಿಸಿ ಅವರ ವಿರುದ್ಧ ದೋಷಾರೋಪ ಹೊರಿಸಲಾಗಿತ್ತು.

ಈ ಪ್ರಕರಣದ ತನಿಖೆಯನ್ನು ಆರಂಭದಲ್ಲಿ ಮಹಾರಾಷ್ಟ್ರದ ಭಯೋತ್ಪಾದನಾ ನಿಗ್ರಹ ದಳ ನಡೆಸಿತ್ತು. 2011 ರಲ್ಲಿ ಈ ಪ್ರಕರಣದ ತನಿಖೆಯನ್ನು ಎನ್‌ಐಎಗೆ ವಹಿಸಲಾಗಿತ್ತು.

ಎನ್‌ಐಎ ಈ ಪ್ರಕರಣದ ತನಿಖೆ ನಡೆಸಿ 7 ಆರೋಪಿಗಳ ವಿರುದ್ಧ ವಿಶೇಷ ನ್ಯಾಯಾಲಯದಲ್ಲಿ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಈ ಪ್ರಕರಣದಲ್ಲಿ ಸಾಧ್ವಿ ಪ್ರಜ್ಞಾಸಿಂಗ್ ಠಾಕೂರ್, ಲೆಫ್ಟಿನೆಂಟ್ ಕರ್ನಲ್ ಪ್ರಸಾದ್‌ಪುರೋಹಿತ್, ನಿವೃತ್ತ ಮೇಜರ್ ರಮೇಶ್ ಉಪಾಧ್ಯಾಯ, ಅಜಯ್ ರಾಹಿರ್ಕರ್, ಸುಧಾಕರ್ ದ್ವಿವೇದಿ, ಸುಧಾಕರ್ ಚರ್ತುವೇದಿ ಮತ್ತು ಸಮೀರ್ ಕುಲಕರ್ಣಿ ಈ 7 ಆರೋಪಿಗಳ ವಿರುದ್ಧ ಎನ್‌ಐಎ ತನಿಖೆ ನಡೆಸಿ ಆರೋಪಿಗಳಿಗೆ ತಕ್ಕ ಶಿಕ್ಷೆ ನೀಡಬೇಕು ಎಂದು ನ್ಯಾಯಾಲಯವನ್ನು ಕೋರಿತ್ತು.



ನ್ಯಾಯಾಲಯದಲ್ಲಿ 2018 ರಿಂದ ಮಾಲೆಂಗಾವ್ ಸ್ಫೋಟ ಪ್ರಕರಣದ ವಿಚಾರಣೆ ನಡೆಸಿದ್ದು, 5 ನ್ಯಾಯಾಧೀಶರು ಈ ಪ್ರಕರಣದ ವಾದ–ವಿವಾದವನ್ನು ಆಲಿಸಿದ್ದರು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ 2025ರ ಏಪ್ರಿಲ್‌ನಲ್ಲಿ ವಾದ–ಪ್ರತಿವಾದ ಪೂರ್ಣಗೊಂಡಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ 123 ಸರ್ಕಾರಿ ಸಾಕ್ಷಿಗಳು ಮತ್ತು 8 ಪ್ರತಿವಾದಿ ಸಾಕ್ಷಿಗಳ ವಿಚಾರಣೆ ನ್ಯಾಯಾಲಯದಲ್ಲಿ ನಡೆದಿತ್ತು. ಈ ಪ್ರಕರಣದ ಅಂತಿಮ ತೀರ್ಪನ್ನು ಮುಂಬೈನ ಎನ್‌ಐಎ ವಿಶೇಷ ನ್ಯಾಯಾಲಯದ ನ್ಯಾಯಮೂರ್ತಿ ಎ.ಕೆ ಲಹೋಟಿ ಇಂದು ಪ್ರಕಟಿಸಿದ್ದು, ಪ್ರಕರಣದ ಎಲ್ಲ ಆರೋಪಿಗಳನ್ನು ಖುಲಾಸೆಗೊಳಿಸಿ ತೀರ್ಪು ನೀಡಿದ್ದಾರೆ.

ಈ ಪ್ರಕರಣದ ತೀರ್ಪು ನೀಡಿರುವ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಎ.ಕೆ ಲಹೋಟಿ ಅವರು ಮೋಟಾರ್ ಸೈಕಲ್‌ನಲ್ಲಿ ಬಾಂಬ್ ಇಡಲಾಗಿದೆ ಎಂದು ಪ್ರಾಸಿಕ್ಯೂಷನ್ ಸಾಬೀತುಪಡಿಸಲು ವಿಫಲವಾಗಿದೆ. ಆರ್‌ಡಿಎಕ್ಸ್‌ನ್ನು ಕಾಶ್ಮೀರದಿಂದ ತರಲಾಗಿದೆ ಎಂಬುದಕ್ಕೂ ಬಲವಾದ ಪುರಾವೆಗಳಿಲ್ಲ, ಹಾಗೆಯೇ ಬೈಕ್ ಸಾಧ್ವಿಪ್ರಜ್ಞಾಸಿಂಗ್ ಅವರದೆಂದು ಸಾಬೀತುಪಡಿಸುವ ಸಾಕ್ಷಿಗಳಿಲ್ಲ ಎಂದು ಹೇಳಿ ಯಾವುದೇ ಬಲವಾದ ಪುರಾವೆಗಳಿಲ್ಲ,ಸಾಕ್ಷ್ಯಗಳಿಲ್ಲ ಎಂದು ಹೇಳಿ ಎಲ್ಲ 7 ಆರೋಪಿಗಳನ್ನು ಖುಲಾಸೆಗೊಳಿಸಿದೆ.

**ಭಗವಾ ಮತ್ತು ಹಿಂದುತ್ವಕ್ಕೆ ಸಿಕ್ಕ ಜಯ**

ಮಾಲೆಂಗಾವ್ ಸ್ಫೋಟ ಪ್ರಕರಣದ ಬಗ್ಗೆ ನ್ಯಾಯಾಲಯ ನೀಡಿರುವ ತೀರ್ಪು ಭಗವಾ ಮತ್ತು ಹಿಂದುತ್ವದ ಜಯ ಎಂದು ಸಾಧ್ವಿಪ್ರಜ್ಞಾಸಿಂಗ್ ಠಾಕೂರ್ ಹೇಳಿದ್ದಾರೆ.

ಮಾಲೆಂಗಾವ್ ಸ್ಫೋಟ ಪ್ರಕರಣದ ಎಲ್ಲ ಆರೋಪಿಗಳನ್ನು ಖುಲಾಸೆಗೊಳಿಸಿರುವ ನ್ಯಾಯಾಲಯದ ತೀರ್ಪಿಗೆ ಪ್ರತಿಕ್ರಿಯಿಸಿರುವ ಇಂದು ಭಗವಾ ಗೆದ್ದಿದೆ.

ಹಿಂದುತ್ವ ಜಯ ಸಾಧಿಸಿದೆ. ಭಾರತ ಮತ್ತು ಭಗವಾವನ್ನು ಅವಹೇಳನ ಮಾಡಿದವರಿಗೆ ತಪ್ಪನ್ನು ಸಾಬೀತುಪಡಿಸಲು ಸಾಧ್ಯವಾಗಲಿಲ್ಲ. ಅಪರಾಧಿಗಳಿಗೆ ದೇವರು ಶಿಕ್ಷೆ ಕೊಡುತ್ತಾರೆ ಎಂದಿದ್ದಾರೆ.

ಈ ಪ್ರಕರಣದ ತನಿಖೆಗೆ ಕರೆಸಿದಾಗ ನನ್ನನ್ನು ಬಂಧಿಸಿ ಚಿತ್ರಹಿಂಸೆ ನೀಡಿದರು. ಇದು ನನ್ನ ಇಡೀ ಬದುಕನ್ನೇ ನಾಶಪಡಿಸಿತು. ನಾನು ಸನ್ಯಾಸ ಜೀವನವನ್ನು ನಡೆಸುತ್ತಿದ್ದೇನೆ. ಹಾಗಾಗಿ ನನ್ನನ್ನು ಆರೋಪಿಯನ್ನಾಗಿಸಿ ಸಂಚು ರೂಪಿಸಿ ಭಗವಾಗೆ ಅವಮಾನ ಮಾಡಿದರು. ಇಂದು ಭಗವಾ ಗೆದ್ದಿದೆ. ಸನ್ಯಾಸಿ ಆಗಿರುವುದಕ್ಕೆ ನಾನು ಇನ್ನೂ ಬದುಕಿದ್ದೇನೆ ಎಂದಿದ್ದಾರೆ.

# ಆನ್‌ಲೈನ್‌ನಲ್ಲಿ ಜಿಹಾದಿ ಚಟುವಟಿಕೆಗಳಲ್ಲಿ ತೊಡಗಿದ್ದ ಪರ್ವೀನ್

**ಬೆಂಗಳೂರು,ಜು.31–** ಸಾಮಾಜಿಕ ಜಾಲತಾಣಗಳಲ್ಲಿ ಅಲ್‌ಖೈದಾ ಪರ ಪ್ರಚಾರ ಹಾಗೂ ಉಗ್ರರ ಸಂಘಟನೆಗಳ ಮುಖಂಡರ ಪ್ರಚೋದನಕಾರಿ ಭಾಷಣಗಳನ್ನು ಹಂಚಿಕೊಂಡು ಗುಜರಾತ್ ಭಯೋತ್ಪಾದನಾ ನಿಗ್ರಹ ದಳದ(ಎಟಿಎಸ್)ಅಧಿಕಾರಿಗಳಿಗೆ ನಗರದಲ್ಲಿ ಸಿಕ್ಕಿಬಿದ್ದಿರುವ ಜಾರ್ಖಂಡ್‌ನ ಶಮಾ ಪರ್ವೀನ್ 10 ಸಾವಿರಕ್ಕೂ ಹಿಂಬಾಲಕರನ್ನು ಹೊಂದಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಆರ್‌ಟಿ ನಗರದಲ್ಲಿ ತಾಯಿ, ಸಹೋದರರ ಜೊತೆ ವಾಸವಿದ್ದ ಶಮಾ ಪರ್ವೀನ್ ಆನ್ ಲೈನ್ ಮೂಲಕ ಜಿಹಾದಿ ಚಟುವಟಿಕೆಗಳನ್ನು ನಡೆಸುತ್ತಿದ್ದಳು. ಪ್ರಚೋದನಾಕಾರಿ ಸಂದೇಶಗಳನ್ನು ಹಂಚುತ್ತಿದ್ದಳು ಎನ್ನುವುದು ವಿಚಾರಣೆಯಲ್ಲಿ ಪತ್ತೆಯಾಗಿದೆ.

ಆರೋಪಿ ಶಮಾ ಪರ್ವೀನ್ ಅನ್ಸಾರಿ ಭಾರತ ಸರ್ಕಾರದ ವಿರುದ್ಧ 'ಸಶಸ್ತ್ರ ಕ್ರಾಂತಿ ಅಥವಾ ಜಿಹಾದ್'ಗೆ ಕರೆ ನೀಡುವ ವಿಷಯವನ್ನು ಪ್ರಸಾರ ಮಾಡಲು ಡಿಜಿಟಲ್ ವೇದಿಕೆಗಳನ್ನು ಬಳಸುತ್ತಿದ್ದಳು. ಆಕೆಯ ಚಟುವಟಿಕೆಗಳು ಕೇವಲ ಸೈದ್ಧಾಂತಿಕ ಪ್ರಚಾರಕ್ಕಷ್ಟೇ ಸೀಮಿತವಾಗಿರಲಿಲ್ಲ. ಧಾರ್ಮಿಕ ಭಿನ್ನಾಭಿಪ್ರಾಯವನ್ನು ಸೃಷ್ಟಿಸಲು ಮತ್ತು ಹಿಂಸಾಚಾರವನ್ನು ಪ್ರಚೋದಿಸಲು ಪ್ರಚೋದನಕಾರಿ ಸಂದೇಶಗಳನ್ನು ಹರಡಲು ಆಕೆ ಸಾಮಾಜಿಕ ಮಾಧ್ಯಮವನ್ನು ಸಕ್ರಿಯವಾಗಿ ಬಳಸುತ್ತಿದ್ದಳು ಎಂದು ಎಟಿಎಸ್ ಅಧಿಕಾರಿಗಳು ಹೇಳಿದ್ದಾರೆ.

ಶಮಾ ಪರ್ವೀನ್ ಅನ್ಸಾರಿ ಎರಡು ಫೇಸ್‌ಬುಕ್ ಪುಟಗಳನ್ನು ಹೊಂದಿ ಇನ್‌ಸ್ಟಾಗ್ರಾಮ್ ಖಾತೆಯೊಂದನ್ನು ನಿರ್ವಹಿಸುತ್ತಿದ್ದಳು.ಇವುಗಳಿಂದ 10 ಸಾವಿರಕ್ಕೂ ಹೆಚ್ಚು ಫಾಲೋವರ್ಸ್ ಹೊಂದಿದ್ದಳು. ಈ ವೇದಿಕೆಗಳ ಮೂಲಕ, ಅಲ್ ಕೈದಾ ಮತ್ತು ಇತರ ಮೂಲಭೂತವಾದಿ ಪ್ರಚಾರಕರಿಗೆ ಸಂಬಂಧಿಸಿದ ವಿಷಯವನ್ನು ಹಂಚಿಕೊಂಡಿದ್ದಳು.

ಎಕ್ಯೂಐಎಸ್ (ಅಲ್ ಕೈದಾ ಇಂಡಿಯನ್ ಸಬ್ ಕಂಟಿನೆಂಟ್) ನಾಯಕಿ ಮೌಲಾನಾ ಅಸಿಮ್ ಉಮರ್, ಹತ್ಯೆಗೀಡಾದ ಅಲ್–ಕೈದಾ ಉಗ್ರ ಅನ್ವರ್ ಅಲ್–ಅವ್ಲಾಕಿ ಮತ್ತು ಲಾಹೋರ್‌ನ ಲಾಲ್ ಮಸೀದಿಯ ಮೌಲಾನಾ ಅಬ್ದುಲ್ ಅಜೀಜ್ ಭಾಷಣಗಳು ಮತ್ತು ವೀಡಿಯೊಗಳನ್ನು ಪರ್ವೀನ್ ಸಾಮಾಜಿಕ ಮಾಧ್ಯಮಗಳಲ್ಲಿ ಹಂಚಿಕೊಳ್ಳುತ್ತಿದ್ದಳು. ಘಜ್ವಾ–ಎ–ಹಿಂದ್‌ನಂತಹ ವಿಷಯಗಳನ್ನು ಪ್ರಚಾರ ಮಾಡಿದ್ದಳು. 'ಕಾಫಿರ್'ಗಳ



ಮೇಲೆ ದಾಳಿಗೆ ಕರೆ ನೀಡಿ ಮತ್ತು ಭಾರತ ಸರ್ಕಾರವನ್ನು ಉರುಳಿಸಲು ಪ್ರತಿಪಾದಿಸಿದ ಸಂದೇಶಗಳನ್ನೂ ಹಂಚಿಕೊಂಡಿದ್ದಳು.

ಶಮಾ ಪರ್ವೀನ್ ಅನ್ಸಾರಿ ಪಾಕಿಸ್ತಾನಿ ಸಂಸ್ಥೆಗಳೊಂದಿಗೆ ಫೋನ್ ಮತ್ತು ಇಮೇಲ್ ಮೂಲಕ ನಿರಂತರ ಸಂಪರ್ಕದಲ್ಲಿರುವುದು ತನಿಖೆಯಿಂದ ಗೊತ್ತಾಗಿದೆ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ. ಜುಲೈ ಆರಂಭದಲ್ಲಿ ಎಟಿಎಸ್ ನಡೆಸಿದ ಪ್ರತ್ಯೇಕ ಕಾರ್ಯಾಚರಣೆಯ ಸಂದರ್ಭದಲ್ಲಿ ಈಕೆಯ ಸಂಚುಗಳ ಬಗ್ಗೆ ತಿಳಿದುಬಂದಿತ್ತು.

ಗುಜರಾತ್ ಎಟಿಎಸ್ ಜುಲೈ 23 ರಂದು ದೆಹಲಿ, ನೊಯ್ಡಾ, ಅಹಮದಾಬಾದ್ ಮತ್ತು ಮೋಡಸಾದ ನಾಲ್ವರನ್ನು ಎಕ್ಯೂಐಎಸ್ ಪರ ಸಾಮಾಜಿಕ ಮಾಧ್ಯಮ ಖಾತೆಗಳಲ್ಲಿ ಮೂಲಭೂತವಾದಿ ಮತ್ತು ಜಿಹಾದಿ ಪ್ರಚಾರದ ವೀಡಿಯೊಗಳನ್ನು ಹಂಚಿಕೊಂಡ ಆರೋಪದ ಮೇಲೆ ಬಂಧಿಸಿತ್ತು. ಈ ವೀಡಿಯೊಗಳು ಭಾರತೀಯ ಮುಸ್ಲಿಂ ಯುವಕರನ್ನು ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ತಿರಸ್ಕರಿಸಲು ಮತ್ತು ಸಶಸ್ತ್ರ ದಂಗೆಯ ಮೂಲಕ ಷರಿಯಾ (ಇಸ್ಲಾಮಿಕ್ ಕಾನೂನು) ಹೇರಲು ಪ್ರಚೋದಿಸುವ ಗುರಿಯನ್ನು ಹೊಂದಿವೆ ಎಂದು ಎಟಿಎಸ್ ಹೇಳಿದೆ.

# ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ಕುಂದು ಕೊರತೆ ಆಲಿಸಿದಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ

**ಕಲಬುರಗಿ,ಜು.31–**ಕಲಬುರಗಿ ಜಿಲ್ಲಾ ಆಸ್ಪತ್ರೆ ಭೇಟಿ ನೀಡಿ ಕುಂದು ಕೊರತೆ ಪರಿಶೀಲಿಸಿ ನಂತರ ಸಾರ್ವಜನಿಕರನ್ನು ಮಾತನಾಡಿಸಿ ಸಮಸ್ಯೆಗಳನ್ನು ಆಲಿಸಿ ಸ್ಥಳದಲ್ಲಿದ್ದ ವೈದ್ಯಾಧಿಕಾರಿಗಳಿಗೆ ಸಾರ್ವಜನಿಕರ ಸಮಸ್ಯೆಗಳಿಗೆ ತುರ್ತಾಗಿ ಸ್ಪಂಧಿಸಲು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಅವರು ಸೂಚನೆ ನೀಡಿದರು.

ಅವರು ಗುರುವಾರದಂದು ಜಿಮ್ಸ್ ಆಸ್ಪತ್ರೆಯಲ್ಲಿನ ಪ್ರತಿಯೊಂದು ವಾರ್ಡಗಳಿಗೆ ಭೇಟಿ ಅಲ್ಲಿನ ರೋಗಿಗಳ ಸಮಸ್ಯೆಗಳನ್ನು ಆಲಿಸಿದ ಅವರು ಆಸ್ಪತ್ರೆಯಲ್ಲಿ ನಡೆಯುತ್ತಿರುವ ಕಾಮಗಾರಿ ಪರಿಶೀಲಿಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಪ್ರತಿಯೊಂದು ವಾರ್ಡಗಳಿಗೆ ಸ್ವಚ್ಛ ಕುಡಿಯುವ ನೀರು, ಗಾಳಿ, ಬೆಳಕು ಮತ್ತು ಶೌಚಾಲಯಗಳನ್ನು ಇರುವುದು ಕಡ್ಡಾಯವಾಗಿದ್ದು, ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ವಹಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಈಗಾಗಲೇ ತಿಳಿಸಲಾಗಿದೆ ಎಂದರು.

ಆಸ್ಪತ್ರೆಯಲ್ಲಿ ಪ್ರಸೂತಿ ವಾರ್ಡಗಳಲ್ಲಿ ಮಹಿಳೆಯರಿಗೆ ಬಿಸಿ ನೀರು ಹಾಗೂ ತಣ್ಣೀರು ಎರಡು ವಾರ್ಡಗಳಲ್ಲಿ ಪೂರೈಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಮ್ಸ್ ನಿರ್ದೇಶಕ ಉಮೇಶ ರೆಡ್ಡಿ ಅವರಿಗೆ ಸೂಚನೆ ನೀಡಲಾಗಿದೆ.

ನಾನು ಮೊದಲ ಭಾರಿಗೆ ಈ ಆಸ್ಪತ್ರೆಗೆ ಭೇಟಿ ನೀಡಿದ್ದಾಗ ಕುಡಿಯುವ ನೀರಿನ ಸಮಸ್ಯೆಯನ್ನು ಗಮನಿಸಿ ಶೀಘ್ರದಲ್ಲಿ



ಸಮಸ್ಯೆ ಬಗೆಹರಿಸಲು ಸೂಚಿಸಲಾಗಿತ್ತು. ರೋಗಿಗಳಿಗೆ ನೀರು ಹೆಚ್ಚಿನ ಅವಶ್ಯಕತೆ ಇದ್ದು, ಅವರಿಗೆ ಕುಡಿಯಲು ನೀರು ಸರಬರಾಜು ಮಾಡಿದ್ದಾರೆ ಆದರೂ ಸಹ ಕೆಲವು ರೋಗಿಗಳು ನೀರು ತಾವೆ ತೆಗೆದುಕೊಂಡು ಬಂದಿದ್ದಾರೆ. ಕುಡಿಯುವ ನೀರಿನ ಬಗ್ಗೆ ಅಧಿಕಾರಿಗಳು ಗಮನ ಹರಿಸಿರುವ ಸುಧಾರಣೆ ಕಂಡು ಬಂದಿದೆ ಎಂದು ತಿಳಿಸಿದರು.

ಸರ್ಕಾರದಿಂದ ಹಣ ಖರ್ಚು ಮಾಡಿ ಆರ್.ಓ. ಪ್ಲ್ಯಾಂಟ್ ಹಾಕಿದ್ದಾರೆ ಅದನ್ನು ಸರಿಯಾಗಿ ಉಪಯೋಗಿಸಲು ಈಗಾಗಲೇ ಅಧಿಕಾರಿಗಳಿಗೆ ತಾಖಿತು ಮಾಡಿದ್ದೇನೆ ಎಂದರು.ಇದೇ ಸಂದರ್ಭದಲ್ಲಿ ಸ್ಥಳದಲ್ಲಿದ್ದ ರೋಗಿಗಳ ಆರೋಗ್ಯವನ್ನು ವಿಚಾರಿಸಿದ ಅವರು ಆಸ್ಪತ್ರೆಯಲ್ಲಿ ಪ್ರತಿ ದಿನ ಸ್ವಚ್ಛತೆ ಕಾಪಾಡಿಕೊಂಡು ಹೋಗಬೇಕು. ಇತ್ತೀಚಿನ ದಿನಗಳಲ್ಲಿ ಬಹಳಷ್ಟು ಬಡ ಜನರು ಸರ್ಕಾರಿ ಆಸ್ಪತ್ರೆಗೆ ಬರುತ್ತಾರೆ, ಅವರಿಗೆ ಉತ್ತಮ ಸೇವೆಯನ್ನು ಒದಗಿಸುವುದು ನಮ್ಮೆಲ್ಲರ ಕರ್ತವ್ಯ, ಅದೇ ರೀತಿಯಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ಎಲ್ಲ ಕಡೆ ಸಿಸಿಟಿವಿ ಕ್ಯಾಮರ್ ಅಳವಡಿಸಲು ಸೂಚನೆ ನೀಡಿದ್ದೇನೆ.

ರೋಗಿಗಳಿಗೆ ಒಳ್ಳೆಯ ಆಹಾರ ನೀಡಲು, ಮಾತ್ರೆಗಳನ್ನು ಸರಿಯಾದ ಸಮಯಕ್ಕೆ ವಿತರಿಸಲು ಪ್ರತಿ ದಿನ ಅವರ ಆರೋಗ್ಯದ ಕಾಳಜಿ ವಹಿಸಲು ಸಂಬಂಧಪಟ್ಟ ವೈದ್ಯಾಧಿಕಾರಿಗಳೊಂದಿಗೆ ಈಗಾಗಲೇ ಚರ್ಚಿಸಿದ್ದೇನೆ ಎಂದರು.ಇದೇ ಸಂದರ್ಭದಲ್ಲಿ ಒಳರೋಗಿಯಾಗಿ ದಾಖಲಾಗಿರುವ ಲಕ್ಷ್ಮೀ ಗಂಡ ಹಣಮಂತ ತಾಯಿ ಮಗು ಆರೋಗ್ಯದ ಬಗ್ಗ ವಿಚಾರಿಸಿ ಮಾತನಾಡಿ, ಮಾತೃವಂದನ ಯೋಜನೆಯಡಿ ಅರ್ಜಿ ಸಲ್ಲಿಸಿರುವ ಬಗ್ಗೆ ಪ್ರಶ್ನಿಸಿದರು. ಲಕ್ಷ್ಮೀ ಅವರು ಪ್ರತಿಕ್ರಿಯಿಸಿ ಈಗಾಗಲೇ ಅರ್ಜಿ ಸಲ್ಲಿಸಲಾಗಿದೆ. ಅದರ ಬಗ್ಗೆ ಮಾಹಿತಿ ಇನ್ನೂ ಬಂದಿಲ್ಲ ಎಂದು ಅವರು ಹೇಳಿದರು. ಅಧ್ಯಕ್ಷರು ತಕ್ಷಣವೇ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗೆ ಮಾತನಾಡಿ ಅವರಿಗೆ ಮಾಹಿತಿ ತಿಳಿಸಬೇಕು ಎಂದರು.

ಈ ಸಮಯದಲ್ಲಿ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಖ್ಯಾತನಾಳ, ಜಿಲ್ಲಾ ಸರ್ಜನ್ ರೂಕ್ಕಿಯ್ಯ ಆಸನ್ ರಬ್ಬಾ , ಮಕ್ಕಳ ತಜ್ಞೆ ರೇವಣ್ಣ ಸಿದ್ದಪ್ಪ ಬೋಸ್ಗಾ, ಡಾ. ಶಾಲಿನ ವೈದ್ಯಾಧಿಕಾರಿಗಳು ಶೂಶ್ರೂಷಕರು ಇದ್ದರು.

# ಹಾಡು ಹಗಲೇ ಮನೆ ಕಳ್ಳತನ ಮಾಡುತ್ತಿದ್ದ ಇಬ್ಬರ ಬಂಧನ

**ಕಲಬುರಗಿ,ಜು.31–**ನಗರದ ಎಸ್.ಎಂ.ಕೃಷ್ಣಾ ಕಾಲೋನಿಯಲ್ಲಿ ಈಚೆಗೆ ಹಾಡು ಹಗಲೇ ನಡೆದ ಮನೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿಗಳನ್ನು ಬಂಧಿಸಿ 16.50 ಲಕ್ಷ ರೂ.ಮೊತ್ತದ 165 ಗ್ರಾಂ.ಬಂಗಾರ ವಶಪಡಿಸಿಕೊಳ್ಳಲಾಗಿದ್ದು, ಅವುಗಳನ್ನು ವಾರಸುದಾರರಿಗೆ ಹಸ್ತಾಂತರಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.

ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿತ್ತಾಪುರ ತಾಲ್ಲೂಕಿನ ಕೋರವಾರ ಗ್ರಾಮದ ಇಮ್ರಾನ್ ತಂದೆ ಇಮಾಮಸಾಬ್ ದಗ್ಗಾಲ್, ಎಸ್.ಎಂ.ಕೃಷ್ಣಾ ಕಾಲೋನಿಯ ಶೇಖ್ ಅಲ್ತಾಫ್ ಅಲಿಯಾಸ್ ಅಲ್ತಾಸ್ ತಂದೆ ಅಮೀನಸಾಬ ಉಪ್ಪಾರ್ ಎಂಬುವವರನ್ನು ಬಂಧಿಸಿ 4,05,00 ರೂ.ಮೌಲ್ಯದ 45 ಗ್ರಾಂ.ಬಂಗಾರದ ಬುದ್ಧನ ಮೂರ್ತಿವುಳ್ಳ ಸರ, 2.70 ಲಕ್ಷ ರೂ.ಮೌಲ್ಯದ 30 ಗ್ರಾಂ.ಬಂಗಾರದ ಸಿಂಗಲ ಸರ ತಾಳಿ ಚೈನ್, 90 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಬೋರಮಳ ಸರ, 1.80 ಲಕ್ಷ ರೂ.ಮೌಲ್ಯದ 20 ಗ್ರಾಂ.ಬಂಗಾರದ 4 ಜೊತೆ ಕಿವಿಯೋಲೆಗಳು,1.80 ಲಕ್ಷ ರೂ.ಮೌಲ್ಯದ 20 ಗ್ರಾಂ.ಬಂಗಾರದ ನೆಕ್ಲೆಸ್, 2.70 ಲಕ್ಷ ರೂ.ಮೌಲ್ಯದ 30 ಗ್ರಾಂ.ಬಂಗಾರದ ಬಳೆಗಳು, 90 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಬ್ರಾಸಲೈಟ್ ಸೇರಿದಂತೆ 16.50 ಲಕ್ಷ ರೂ.ಮೌಲ್ಯದ 165 ಗ್ರಾಂ.ಬಂಗಾರದ ವಿವಿಧ ನಮೂನೆಯ ಆಭರಣ, 50 ಸಾವಿರ ರೂ.ಮೌಲ್ಯದ ಬೈಕ್ ಜಪ್ತಿ ಮಾಡಿ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ತಿಳಿಸಿದರು.

## ನಾಗರ ಪಂಚಮಿಯ ನಿಮಿತ್ಯ 50 ಕೆ ಜಿ ಬಾರ ಎತ್ತುವ ಸ್ಪರ್ಧೆ



**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜು.31–**ತಾಲೂಕಿನ ಶಂಕ್ರಬಂಡಿಯಲ್ಲಿ ನಾಗರ ಪಂಚಮಿ ಹಬ್ಬದ ಅಂಗವಾಗಿ ಅಂಗವಾಗಿ 50 ಕೆ ಜಿ ಬಾರ ಹೊತ್ತು ಶಂಕರಬಂಡಿ ಯಿಂದ ದೇವದುರ್ಗ ಜೈರುದ್ಧಿನ್ ಪಾಷಾ ವೃತ್ತದವರೆಗೂ ಭಾರ ಒತ್ತು ಹತ್ತು ಸುತ್ತು ಸುತ್ತುವ ಸ್ಪರ್ಧೆ ಏರ್ಪಡಿಸಲಾಗಿತ್ತು.

ಈ ಸ್ಪರ್ಧೆಯಲ್ಲಿ 50 ಕೆಜಿ ಭಾರದ ಚೀಲ ಹೊತ್ತ ವಿಜೇತ ಯುವಕ ಹನುಮಗೌಡ ಶಂಕರಬಂಡಿ ಇವರಿಗೆ 25000 ಬಹುಮಾನ ಪಡೆದಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮದ ಯುವಕರು ಉಪಸ್ಥಿತರಿದ್ದರು.

## ಪತ್ರಿಕೆಗಳು ಜನಸಾಮಾನ್ಯರ ವಿಶ್ವವಿದ್ಯಾಲಯ



**ಔರಾದ,ಜು.31–**ಜನಸಾಮಾನ್ಯರ ವಿಶ್ವವಿದ್ಯಾಲಯ ಎಂದೇ ಕರೆಯಲ್ಪಡುವ ಪತ್ರಿಕೆಗಳು ನಮ್ಮಲ್ಲಿ ಸಾಹಿತ್ಯಾಭಿರುಚಿ, ರಾಜಕೀಯ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಅರಿವು ಮೂಡಿಸುವ ಕಾರ್ಯಗಳು ಮಾಡುತ್ತಿವೆ ಎಂದು ಸಾಹಿತಿ ಡಾ.ಶಿವಲಿಂಗ ಹೆಡೆ ಹೇಳಿದರು.

ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಮೀಡಿಯಾ ಜರ್ನಲಿಸ್ಟ ಯುನಿಯನ್ ವತಿಯಿಂದ ನಡೆದ ಪತ್ರಿಕಾ ದಿನಾಚರಣೆಯಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು ಇಂದು ಪತ್ರಿಕೆಗಳು ಜನ ಸಾಮಾನ್ಯರ, ದಿನ ದಲಿತರ ಹಾಗೂ ಬಡವರ ಧ್ವನಿಯಾಗಿ ನಿಂತಿವೆ. ಸಾಮಾಜಿಕ ಸಮಸ್ಯೆಗಳನ್ನು ಪತ್ರಿಕಾ ವರದಿಯಲ್ಲಿ ಬಿತ್ತರಿಸುವ ಮೂಲಕ ಸರ್ಕಾರದ ಹಾಗೂ ಅಧಿಕಾರಿಗಳ ಕಣ್ಣು ತೆರೆಸಿ ಆ ಸಮಸ್ಯೆಗಳಿಗೆ ಪರಿಹಾರ ಒದಗಿಸುತ್ತಿವೆ. ಜನಸಾಮಾನ್ಯರಿಗೆ ಹಾಗೂ ವಿದ್ಯಾರ್ಥಿಗಳಿಗೆ ಜ್ಞಾನ ನೀಡುವ ವಿಶ್ವವಿದ್ಯಾಲಯವಾಗಿವೆ, ವಿಶ್ವವಿದ್ಯಾಲಯದಲ್ಲಿ ಪಡೆಯುವ ಜ್ಞಾನಕ್ಕಿಂತ ಹೆಚ್ಚಿನ ಜ್ಞಾನವನ್ನು ಪತ್ರಿಕೆಗಳು ನಮಗೆ ನೀಡುತ್ತಾ ಬಂದಿವೆ. ಪ್ರಜಾಪ್ರಭುತ್ವ ಇಂದು ಸರಿಯಾಗಿದೆ ಎಂದರೆ ಅದಕ್ಕೆ ಮೂಲ ಕಾರಣ ಪತ್ರಿಕೆಗಳು, ಕನ್ನಡ ಭಾಷೆ ಸಮೃದ್ಧ ವಾಗಿ ಬೆಳೆಯಲು ಕಾರಣ ಪತ್ರಿಕೆಗಳು. ಎಲ್ಲ ಸಾಹಿತಿಗಳು, ಕವಿಗಳು ಬೆಳಕಿಗೆ ಬಂದದ್ದು ಕೂಡ ಪತ್ರಿಕೆ ಗಳಿಂದಲೇ, ಸಾಹಿತ್ಯ ಸಂಸ್ಕೃತಿ, ಭಾಷೆ, ದೇಶ ಕಟ್ಟುವಲ್ಲಿ ಪತ್ರಿಕೆಗಳ ಪಾತ್ರ ಪ್ರಮುಖವಾಗಿದೆ. ಪತ್ರಕರ್ತರು ನ್ಯಾಯ ನಿಷ್ಠುರಿಯಾಗಿ ಯಾರ ಮೇಲೆ ಕೂಡ ದಾಕ್ಷಿಣ್ಯ ತೋರದೆ ಸಮಾಜಕ್ಕೆ ಸತ್ಯಾಂಶ ತೋರುವ ಕೆಲಸ ಮಾಡಲಿ ಎಂದು ತಿಳಿಸಿದರು.

ದಿವ್ಯ ಸಾನಿಧ್ಯ ವಹಿಸಿದ ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದೇವರು ಮಾತನಾಡಿ ಎಲ್ಲ ರಂಗದ ಸಮೃದ್ಧಿಗೆ ಕಾರಣ ಪತ್ರಿಕೆಗಳು, ಸಾಮಾಜಿಕ ಸಮಸ್ಯೆಗಳ ಪರಿಹಾರಕ್ಕೆ ಪತ್ರಿಕೆಗಳು ಸನ್ನಧರಾಗಬೇಕು. ಪತ್ರಿಕಾರಂಗ ಕನ್ನಡಿ ಇದ್ದ ಹಾಗೆ ಸಮಾಜದಲ್ಲಿನ ಅಂಕುಡೊಂಕು ತಿದ್ದಿ ಸನ್ಮಾರ್ಗಕ್ಕೆ ತರುವ ಕೆಲಸ ಪತ್ರಿಕೆಗಳು ಮಾಡುತ್ತಿವೆ. ಇಂದು ಅನೇಕ ಮಾಧ್ಯಮಗಳು ಅತಿ ರೋಚಕತೆಯಲ್ಲಿ ವಿಶ್ವಾಸಾರ್ಹತೆ ಕಳೆದುಕೊಳ್ಳುವುದು ನಾವು ಕಾಣುತ್ತೇವೆ ಆದರೆ ಪತ್ರಿಕೆಗಳು ವಿಶ್ವಾಸಾರ್ಹತೆ ಉಳಿಸಿಕೊಂಡು ಸಮಾಜದ ಕಣ್ಣು ತೆರೆಸುವ ಮೂಲಕ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತಾ ಇರುವುದು ಶ್ಲಾಘನೀಯ ಕಾರ್ಯ ಎಂದರು.

ತಹಸೀಲ್ದಾರ ಮಹೇಶ ಪಾಟೀಲ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಶಿವಕುಮಾರ ಘಾಟೆ, ಪತ್ರಕರ್ತ ಅನಿಲಕುಮಾರ ದೇಶಮುಖ ಮಾತನಾಡಿದರು. ಈ ವೇಳೆ ಶ್ರೀ ಅಮರೇಶ್ವರ ಕೋ–ಆಪರೇಟಿವ್ ಬ್ಯಾಂಕ್ ಹಾಗೂ ಲೋಕಮುದ್ರಾ ಕೋ–ಆಪರೇಟಿವ್ ಬ್ಯಾಂಕ್ ವತಿಯಿಂದ ಪತ್ರಕರ್ತರನ್ನು ಗೌರವಿಸಲಾಯಿತು.

ಈ ಸಂಧರ್ಭದಲ್ಲಿ ಪಪಂ ಅಧ್ಯಕ್ಷೆ ಸರುಬಾಯಿ ಘುಳೆ, ಕಸಾಪ ಅಧ್ಯಕ್ಷ ಬಾಲಾಜಿ ಅಮರವಾಡಿ, ಪಂಡರಿ ಆಡೆ, ಮಾರುತಿ ವಾಡೆಕರ್, ಮೀಡಿಯಾ ಜರ್ನಲಿಸ್ಟ ಯುನಿಯನ್ ತಾಲೂಕು ಅಧ್ಯಕ್ಷ ಸಂತೋಷ ಚಾಂಡೇಶ್ವರೆ, ರವಿ ಮುಕ್ತೆದಾರ, ಬಸವರಾಜ ಶಿವಪೂಜೆ, ಶಿವಾನಂದ ಬೆಂದ್ರೆ, ರಾಮದಾಸ ಪಾಟೀಲ, ಅಮರ ಮುಕ್ತೆದಾರ, ಮಧುಕರ ಎಲ್ಲೆನೋರ ಸೇರಿದಂತೆ ಸಂಘ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಕೃಷಿ ಇಲಾಖೆಯಿಂದ ಪಿಎಮ್‌ಎಫ್‌ಎಮ್‌ಇ ಯೋಜನೆಯ ಕಾರ್ಯಗಾರ ಯಶಸ್ವಿ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.31–**ಆತ್ಮ ನಿರ್ಭರ ಭಾರತ ಅಭಿಯಾನದ ಭಾಗವಾಗಿ ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ನಿಯಮ ಬದ್ದಗೊಳಿಸುವಿಕೆ ಅಂಗವಾಗಿ ಜಿಲ್ಲಾಮಟ್ಟದ ಅರಿವು ಮೂಡಿಸುವ ಕಾರ್ಯಾಗಾರವು ಬುಧವಾರ ನಡೆಯಿತು.

ಇಲ್ಲಿನ ಕೃಷಿ ಇಲಾಖೆಯಿಂದ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲಾ ತಾಲೂಕಿನ ರೈತರು ಪಿಎಮ್‌ಎಫ್‌ಎಮ್‌ಇ ಯೋಜನೆಯ ಫಲಾನುಭವಿಗಳು, ರೈತ ಉತ್ಪಾದಕ ಸಂಸ್ಥೆಗಳ ಪ್ರತಿನಿಧಿಗಳು, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದ ಮತ್ತು ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದ ಫಲಾನುಭವಿಗಳು ಹಾಗೂ ನವೋದ್ಯಮಿಗಳು ಭಾಗವಹಿಸಿ ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಕೆಪೆಕ್ ಸಂಸ್ಥೆಯ ರಾಜ್ಯ ಮಟ್ಟದ ಅಧಿಕಾರಿಗಳು ಭಾಗವಹಿಸಿ ಪಿಎಮ್‌ಎಫ್‌ಎಮ್‌ಇ ಯೋಜನೆಯ ಸೌಲಭ್ಯವನ್ನು ಪಡೆಯಲು ಇರುವಂತಹ ಮಾನದಂಡಗಳ ಕುರಿತು ಮಾಹಿತಿ ಒದಗಿಸಿದರು. ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಈ ಯೋಜನೆಯಡಿ ಸಾಲ–ಸೌಲಭ್ಯದ ಕುರಿತು ಮಾಹಿತಿ ನೀಡಿದರು.

ಆಹಾರ ಸಂಸ್ಕರಣೆಯ ಕುರಿತಾಗಿ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ಸಂಸ್ಕರಣೆ ಮತ್ತು ಆಹಾರ ತಂತ್ರಜ್ಞಾನ ವಿಭಾಗದ ಮುಖ್ಯಸ್ಥರು ಆಹಾರ ಸಂಸ್ಕರಣೆಯ ಮತ್ತು ತಮ್ಮಲ್ಲಿರುವ ಸೌಲಭ್ಯಗಳ ಕುರಿತಾಗಿ ರೈತರಿಗೆ ಮಾಹಿತಿ ನೀಡಿದರು. ಸೆಲ್ಕೊ ಸಂಸ್ಥೆಯ ಪ್ರತಿನಿಧಿಗಳು ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಯೋಜನೆಯ ಫಲಾನುಭವಿ ರೈತರಾದ ಶ್ರೀಮತಿ ಈರಮ್ಮ ಅವರು ಕಸೆ ಕ್ಯಾಂಪ್ ಮತ್ತು ಮಹಮ್ಮದ್ ಇಸ್ಮಾಯಿಲ್ ರಾಯಚೂರು ಅವರು ಈ ಯೋಜನೆಯಿಂದ ತಾವು ಪಡೆದಿರುವಂತ ಸಹಾಯಧನ ಮತ್ತು ತಮ್ಮ ಉತ್ಪನ್ನಗಳ ಹಾಗೂ ಆದಾಯದ ಕುರಿತು ವೇದಿಕೆಯಲ್ಲಿ ಅನಿಸಿಕೆ ಹಂಚಿಕೊಂಡರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಂಟಿ ಕೃಷಿ ನಿರ್ದೇಶಕರಾದ ಪ್ರಕಾಶ್ ಚಾವ್ಹಾಣ್ ಅವರು ಮಾತನಾಡಿ, ಈ ಯೋಜನೆಯಡಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಸುಮಾರು 135 ರೈತ ಫಲಾನುಭವಿಗಳು ಸೌಲಭ್ಯ ಪಡೆದಿರುವುದಾಗಿ ಮತ್ತು ಇದರಿಂದ ಉತ್ತಮ ಜೀವನ ನಿರ್ವಹಣೆ ಮಾಡುತ್ತಿರುವುದಾಗಿ ಹಾಗೂ ಇನ್ನೂ ಹೆಚ್ಚಿನ ರೈತರು ಈ ಯೋಜನೆಯ ಸೌಲಭ್ಯವನ್ನು ಪಡೆಯಬೇಕಾಗಿ ತಿಳಿಸಿದರು.

ಕಾರ್ಯಾಗಾರದಲ್ಲಿ ಯೋಜನೆಯ ಸಹಾಯಧನ ಸೌಲಭ್ಯ ಪಡೆದಂತಹ ಫಲಾನುಭವಿಗಳು ತಮ್ಮ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ಕೆಪೆಕ್ ಸಂಸ್ಥೆಯ ಅಧಿಕಾರಿಗಳು, ಜಂಟಿ ಕೃಷಿ ನಿರ್ದೇಶಕರು, ಕೌಶಲ್ಯಾಭಿವೃದ್ಧಿ ಇಲಾಖೆಯ ಜಂಟಿ ನಿರ್ದೇಶಕರು, ನಬಾರ್ಡ್ ಮುಖ್ಯಸ್ಥರು, ಲೀಡ್ ಬ್ಯಾಂಕ್ ವ್ಯವಸ್ಥಾಪಕರು, ರಾಯಚೂರು ವಿಭಾಗದ ಉಪ ಕೃಷಿ ನಿರ್ದೇಶಕರು, ಲಿಂಗಸುಗೂರು ವಿಭಾಗದ ಉಪ ಕೃಷಿ ನಿರ್ದೇಶಕರು, ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ವಿಜ್ಞಾನಿಗಳು, ಉಪ ನಿರ್ದೇಶಕರು–ತೋಟಗಾರಿಕೆ ಇಲಾಖೆ ಮತ್ತು ಪಶು ಸಂಗೋಪನಾ ಇಲಾಖೆ, ಸಂಸ್ಥೆಯ ಪ್ರತಿನಿಧಿಗಳು, ತಾಲೂಕಿನ ಕೃಷಿ ಇಲಾಖೆಯ ಎಲ್ಲಾ ಅಧಿಕಾರಿಗಳು, ಯೋಜನೆಯ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳು ಹಾಜರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಆ.2ಕ್ಕೆ ನಿವೃತ್ತ ಮುಖ್ಯಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮ : ಅಮರಪ್ಪ ಸಾಲಿ

**ಯುವ ಮಾರ್ಗ ಸುದ್ದಿ**




**ಲಿಂಗಸುಗೂರು,ಜು.31–** ಕರ್ನಾಟಕ ರಾಜ್ಯ ಸರಕಾರಿ ಹಿರಿಯ ಹಾಗೂ ಪದವೀಧರೇತರ ಭಡ್ತಿ ಮುಖ್ಯ ಗುರುಗಳ ಸಂಘದಿಂದ ಭಡ್ತಿ ನಿವೃತ್ತ ಮುಖ್ಯ ಶಿಕ್ಷಕರಿಗೆ ಗೌರವ ಸಮರ್ಪಣೆ ಹಾಗೂ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಗುರುಭವನದಲ್ಲಿ ಆ.2ರಂದು ಮಧ್ಯಾಹ್ನ 2–30ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ಅಮರಪ್ಪ ಸಾಲಿ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿದ ಅವರು, ಅಂದಿನ ದಿನ ಶನಿವಾರವಾದ್ದರಿಂದ ಮಧ್ಯಾಹ್ನ ಶಾಲಾ ಅವಧಿಯ ಬಳಿಕ ಸಂಘದ ಸದಸ್ಯರೆಲ್ಲರೂ ಹಾಜರಾಗಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಶಿವಶಂಕರ ಪಾಟೀಲ್, ಹುಲುಗಪ್ಪ, ನಾಗೇಶ ಸೇರಿದಂತೆ ಇದ್ದರು.

## ಸಿರವಾರ ನೀರಾವರಿ ಇಲಾಖೆ ಮುಂದೆ ಧರಣಿ ಸತ್ಯಾಗ್ರಹ

**ಯುವ ಮಾರ್ಗ ಸುದ್ದಿ**



**ಸಿರವಾರ,ಜು.31–**ನಕ್ಕುಂದಿ ಗ್ರಾಮ ದ ಉಪ ಕಾಲುವೆ ಡಿನಂ, 76/3/1 ರಲ್ಲಿ ಕಟ್ ಓಪನ್,ಬೆಡ್ ಕಾಂಕ್ರೇಟ್,ಕಂಟ್ರೋಲ್ ಪಾಯಿಂಟ್ ಕಾನೂನು ಬಾಹಿರ ಈ ಕಾಮಗಾರಿ ಮಾಡಿಸಿದ ಹಿರೇಕೊಟ್ನೆಕಲ್ ಉಪ ವಿಭಾಗದ ಕಿರಿಯ ಜೆಇ ಗಳಾದ ರಮೇಶ,ಹಾಗೂ ಲಕ್ಷ್ಮೀ ಇವರನ್ನು ಅಮಾನತ್ ಮಾಡಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಮಿತಿ ಅದ್ಯಕ್ಷ ಬಸವರಾಜ ನಕ್ಕುಂದಿ ಆಗ್ರಹಿಸಿದರು.ಗ್ರಾಮದ ರೈತರಿಂದ ನೀರಾವರಿ ಇಲಾಖೆ ಮುಂದೆ ನಡೆದ ಧರಣಿ ಸತ್ಯಾಗ್ರಹ ಉದೇಶಿಸಿ ಮಾತನಾಡಿದ ಅವರು,ಮಾನ್ವಿ ತಾಲೂಕಿನ ನಕ್ಕುಂದಿ ಗ್ರಾಮದ ಡಿಸ್ಟಬ್ಯೂಟರ್ ನಂ,76/3/1 ಉಪ ಕಾಲುವೆ ಮೇಲ್ಬಾಗದ ಸನಂ 105 ವಿಸ್ತೀರ್ಣ,26 ಎಕರೆ ಸನಂ,106,ವಿಸ್ತೀರ್ಣ 9,ಎ8ಗು,ಸನಂ,108 ವಿಸ್ತೀರ್ಣ 10ಎ,24 ಗು,ಹಾಗೂ ಸನಂ,90, ವಿಸ್ತೀರ್ಣ,8ಎ 32 ಗುಂಟೆ ಇರುವ ಈ ಜಮೀನಗಳ ಮಾಲಿಕರು ಅಕ್ರಮವಾಗಿ ನೀರು ಹರಿಸಿಕೊಳ್ಳುತ್ತಿದ್ದಾರೆ,ಇದರಿಂದ ಕೆಳ ಭಾಗದ ರೈತರ ಹೊಲಗಳಿಗೆ ನೀರು ಬರುತ್ತಿಲ್ಲ ಬೆಳೆ ನಾಟಿ ಮಾಡಿದ ಭತ್ತ,ಹತ್ತಿ, ಮೆಣಸಿನಕಾಯಿ ಒಣಗುತ್ತಿವೆ ಎಂದು ರೈತರು ಪಟ್ಟು ಹಿಡಿದು ಧರಣಿ ಹಮ್ಮಿಕೊಂಡಿದೆ,ಅಕ್ರಮವಾಗಿ ಡಬ್ಲೂಸಿ ವಾಟರ್ ಕೋರ್ಸನಲ್ಲಿ ಅಕ್ರಮ ಕಟ್ ಓಪನ್ ಮಾಡಿಕೊಂಡು,ಪೈಪ್ ಗಳನ್ನು ಅಳವಡಿಸಿಕೊಂಡಿದ್ದು ಇರುತ್ತದೆ ಸುತ್ತೋಲೆಯ ಪ್ರಕಾರ ಎಫ್ ಸಿ ಫೀಲೆಡ್ ಕಾಲುವೆಯಲ್ಲಿ ಕಟ್ಟಬೇಕಾದ ನಿಯಮವಿದ್ದರೂ ನೀರಾವರಿ ಇಲಾಖೆ ಅಧಿಕಾರಿಗಳು ಅಕ್ರಮವಾಗಿ ನೀರು ತೆಗೆದುಕೊಳ್ಳುವ ಭೂಮಾಲೀಕರೊಂದಿಗೆ ಶಾಮೀಲಾಗಿ ಹಣದ ಆಮೀಷಕ್ಕೆ ಒಳಗಾಗಿದ್ದಾರೆ,ನಿಜವಾದ ರೈತರಿಗೆ ಅನ್ಯಾಯವೆಸಗಿದ ನೀರಾವರಿ ಇಲಾಖೆಯ ಜೆಇ ಗಳನ್ನು ಕೂಡಲೇ ಅಮಾನತ್ ಮಾಡಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಆಗ್ರಹಿಸಿದೆ ಈ ಸಂದರ್ಭದಲ್ಲಿ, ಹೋರಾಟಕ್ಕೆ ಬೆಂಬಲಿಸಿದ ಸ್ಥಳೀಯ ಮುಖಂಡರಾದ ಜೆ ಅಬ್ರಾಹಂ ಹೊನ್ನಟಗಿ, ಡಿ ಜಯಪ್ಪ,ಪಪಂ ಸದಸ್ಯ ಅಜೀತಕುಮಾರ ಹೊನ್ನಟಗಿ,ಕದಸಂಸ ಜಿಲ್ಲಾ ಸಮಿತಿ ಅದ್ಯಕ್ಷ ಬಸವರಾಜ ನಕ್ಕುಂದಿ,ವಿರೇಶ,ತಿಮ್ಮಯ್ಯ ನಾಯಕ ನಕ್ಕುಂದಿ, ಮಹಾಂತೇಶ ಪೂಜಾರಿ ನಕ್ಕುಂದಿ, ಶಿವಪ್ಪ ನಾಡಗೌಡ,ವಿರುಪಣ್ಣ ಚಲುವಾದಿ ನಕ್ಕುಂದಿ, ಸೇರಿದಂತೆ ಇನ್ನು ಅನೇಕ ರೈತರು ಇದ್ದರು.

## ಓಪೆಕ್ ಆಸ್ಪತ್ರೆಯಿಂದ ತಿದ್ದುಪಡಿ ನೇಮಕಾತಿ ಅಧಿಸೂಚನೆ

**ರಾಯಚೂರು,ಜು.31–**ಇಲ್ಲಿನ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಅಧೀನದ ರಾಜೀವ್ ಗಾಂಧಿ ಸೂಪರ್‌ಸ್ಪೆಷಾಲಿಟಿ (ಓಪೆಕ್) ಆಸ್ಪತ್ರೆಯು ದಿನಾಂಕ 16–07–2025ರಂದು ಹೊರಡಿಸಿದ ಅಧಿಸೂಚನೆ ಅನ್ವಯ ರಾಜೀವ್ ಗಾಂಧಿ ಸೂಪರ್‌ಸ್ಪೆಷಾಲಿಟಿ (ಓಪೆಕ್) ಆಸ್ಪತ್ರೆಯಲ್ಲಿ ಬೋಧಕೇತರ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಒಟ್ಟು 90 ಬೋಧಕೇತರ ಹುದ್ದೆಗಳ ನೇಮಕಾತಿ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿರುತ್ತದೆ. ರಿಟ್ ಪಿಟಿಷನ್ ಸಂಖ್ಯೆ: 200099/2024 ಅನ್ವಯ (ಮಾನ್ಯ ನ್ಯಾಯಾಲಯದ ಪ್ರಕರಣದಲ್ಲಿನ ಅಭ್ಯರ್ಥಿಗಳಿಗೆ ಮಾತ್ರ) ಮಾನ್ಯ ಉಚ್ಚ ನ್ಯಾಯಾಲಯ, ಕಲಬುರ್ಗಿ ಅವರ ಆದೇಶದಂತೆ ಕ್ರಮ ಸಂಖ್ಯೆ 9 ಮತ್ತು 10 ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಕೂಲವಾಗಲು ದಿನಾಂಕ 11–08–2025ರಂದು ಕೊನೆಯ ದಿನಾಂಕ ಆಗಿರುತ್ತದೆ.

ಅರ್ಹತೆಯ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಓಪೆಕ್ ಆಸ್ಪತ್ರೆಯ ವಿಶೇಷಾಧಿಕಾರಿಗಳು ಮತ್ತು ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಗಸ್ಟ್ 01ರಂದು ವ್ಯಸನಮುಕ್ತ ದಿನಾಚರಣೆ, ವಿಚಾರ ಸಂಕೀರಣ

**ರಾಯಚೂರು,ಜು.31–**ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ರಾಯಚೂರು ಹಾಗೂ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಎಸ್.ಕೆ.ಇ. ಪ್ಯಾರಾ ಮೆಡಿಕಲ್ ಶಿಕ್ಷಣ ಸಂಸ್ಥೆ ರಾಯಚೂರುಇವರ ಸಹಯೋಗದಿಂದ ಶ್ರೀ ಮ.ನಿ.ಪ್ರ.ಡಾ.ಮಹಾಂತ ಶಿವಯೋಗಿಗಳ ಜನ್ಮದಿನದ ಅಂಗವಾಗಿ ವ್ಯಸನಮುಕ್ತ ದಿನಾಚರಣೆ ಹಾಗೂ ವಿಚಾರ ಸಂಕೀರಣ ಕಾರ್ಯಕ್ರಮ ಮತ್ತು ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ ಕಾರ್ಯಕ್ರಮವು ಆಗಸ್ಟ್ 01 ಬೆಳಿಗ್ಗೆ 11 ಗಂಟೆಗೆ ನಗರದ ಎಸ್.ಕೆ.ಇ.ಪ್ಯಾರಾ ಮೆಡಿಕಲ್ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು.ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ್ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಪ್ರಭಾರ ಅಧ್ಯಕ್ಷರಾದ ಸಾಜೀದ್ ಸಮೀರ್, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಆಯುಕ್ತರಾದ ಶ್ರೀಮತಿ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮಾನಸಿಕ ರೋಗ ತಜ್ಞರಾದ ಡಾ.ಮನೋಹರ ಪತ್ತಾರ ಅವರು ವಿಶೇಷ ಉಪನ್ಯಾಸ ನೀಡುವರು. ನಗರದ ಕೆಇಬಿ ಕಾಲೋನಿಯ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ನಡೆಸಿದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಇದೆ ವೇಳೆ ಪ್ರಮಾಣ ಪತ್ರ ನೀಡಲಾಗುವುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಸುಲೈಮಾನ್ ಡಿ.ನದಾಫ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H